ಕನ್ನಡ ದಿನಪತ್ರಿಕೆ
01 ಮಾರ್ಚ್ । ಶುಕ್ರವಾರ
01 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 12 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## 2.35 ಕೋಟಿ ರೂ. ಮಾದಕ ವಸ್ತು ಜಪ್ತಿ: ನಾಲ್ವರ ಬಂಧನ



ಬೆಂಗಳೂರು: ಸಿಸಿಬಿ ಪೊಲೀಸರು ಡ್ರಗ್ ಪೆಡ್ಲರ್ಗಳ ವಿರುದ್ಧ ಕಾರ್ಯಾಚರಣೆ ಕೈಗೊಂಡು ಮೂವರು ವಿದೇಶಿ ಡ್ರಗ್ ಪೆಡ್ಲರ್ಗಳು ಸೇರಿದಂತೆ ನಾಲ್ವರನ್ನು ಬಂಧಿಸಿ ಅವರುಗಳಿಂದ ಒಟ್ಟು 2.35 ಕೋಟಿ ಮೌಲ್ಯದ ನಿಷೇಧಿತ ಮಾದಕ ವಸ್ತುಗಳಾದ 730 ಗ್ರಾಂ ಎಂ.ಡಿ.ಎಂಎ ಕ್ರಿಸ್ಟೆಲ್, 1273 ಎಕ್ಸ್ಟಸಿ ಪಿಲ್ಸ್‌ಗಳು, 42 ಗ್ರಾಂ ಹೈಡ್ರೋಗಾಂಜ ಮತ್ತು ಕೃತ್ಯಕ್ಕೆ ಬಳಸಲಾಗುತ್ತಿದ್ದ 4 ಮೊಬೈಲ್ ಫೋನ್ಗಳನ್ನು ವಶಪಡಿಸಿಕೊಂಡಿದ್ದಾರೆ.

ಸೋಲದೇವನಹಳ್ಳಿ ಪೊಲೀಸ್ ಠಾಣೆಯ ಪ್ರಕರಣದಲ್ಲಿ ವಶಕ್ಕೆ ಪಡೆದಿರುವ ಇಬ್ಬರು ವಿದೇಶಿ ಡ್ರಗ್ಪೆಡ್ಲರ್ಗಳು ಪ್ರವಾಸಿ ವೀಸಾದಡಿ ಭಾರತಕ್ಕೆ ಬಂದಿದ್ದರು. ಒಬ್ಬ ಮೊದಲಿಗೆ ಮುಂಬೈನಲ್ಲಿ ನೆಲೆಸಿ ಎನ್ಡಿಪಿಎಸ್ ಪ್ರಕರಣದಲ್ಲಿ ಜೈಲಿನಲ್ಲಿದ್ದನು.

ಈತನು ಜೈಲಿನಿಂದ ಬಿಡುಗಡೆಯಾದ ನಂತರ ನಗರಕ್ಕೆ ಬಂದು ಮತ್ತೊಬ್ಬ ವಿದೇಶಿ ಡ್ರಗ್ಪೆಡ್ಲರ್ನ ಜೊತೆಗೂಡಿ ಪರಿಚಯಸ್ಥ ಗಿರಾಕಿಗಳಿಗೆ ವಿವಿಧ ರೀತಿಯ ನಿಷೇಧಿತ ಮಾದಕ ವಸ್ತುಗಳನ್ನು ಸರಬರಾಜು ಮಾಡುವ ಮೂಲಕ ಅಕ್ರಮ ಹಣ ಸಂಪಾದನೆಯಲ್ಲಿ ತೊಡಗಿದುದ್ದು ತನಿಖೆಯಿಂದ ತಿಳಿದು ಬಂದಿದೆ.

# ಕಾಂಗ್ರೆಸ್ ಸರ್ಕಾರ ಇರೋವರೆಗೂ ಗ್ಯಾರಂಟಿ ಯೋಜನೆಗಳು ನಿಲ್ಲಲ್ಲ

## ಗ್ಯಾರಂಟಿ ಸಮಾವೇಶದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿಕೆ

ಮಾಗಡಿ : ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಇರುವವರೆಗೂ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ. ಇವುಗಳು ನಿರಂತರವಾಗಿ ನಡೆಯಲಿವೆ. ರಾಜಕೀಯ ಲಾಭಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿಲ್ಲ. ಬಡ ಜನರ ಸಬಲೀಕರಣಕ್ಕಾಗಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರಾದ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಹೇಳಿದ್ದಾರೆ.

ರಾಮನಗರ ಜಿಲ್ಲೆಯ ಮಾಗಡಿ ಪಟ್ಟಣದ ಕೋಟೆ ಮೈದಾನದಲ್ಲಿ ಗುರುವಾರ ನಡೆದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಕಾಂಗ್ರೆಸ್ ಅಂ–ದರೆ ಬದ್ಧತೆ, ಬದ್ಧತೆ ಅಂದರೆ ಕಾಂಗ್ರೆಸ್. ನಮ್ಮದು ನುಡಿದಂತೆ ನಡೆದ ಸರ್ಕಾರ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸರ್ಕಾರ ಉತ್ತಮವಾಗಿ



ಕೆಲಸ ನಿರ್ವಹಿಸುತ್ತಿದೆ. ಅಧಿಕಾರಕ್ಕೆ ಬಂದ ಕೇವಲ ಆರು ತಿಂಗಳಲ್ಲಿ ಚುನಾವಣೆಗೂ ಮುನ್ನ ಘೋಷಿಸಿದ್ದ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ ಎಂದು ಹೇಳಿದರು.

ನಾವು ನಮ್ಮ ಸರಕಾರ ಬಂದ ಮರು ಕ್ಷಣದಿಂದಲೇ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳ ಕುರಿತು ಜನಜಾಗೃತಿ ಮೂಡಿಸಬೇಕು, ಎಷ್ಟು ಜನರಿಗೆ ನಮ್ಮ ಗ್ಯಾರಂಟಿ ಯೋಜನೆ ತಲುಪಿದೆ ಎನ್ನುವುದನ್ನು ತಿಳಿದುಕೊಳ್ಳಬೇಕು ಎನ್ನುವ ಉದ್ದೇಶದಿಂದ ಎಲ್ಲ ಕಡೆ ಗ್ಯಾರಂಟಿ ಸಮಾವೇಶಗಳನ್ನು ಆಯೋಜಿಸುತ್ತಿದ್ದೇವೆ. ಡಿಮೊನಿಟೈಜೇಶನ್, ಕೊರೋನಾ, ಪ್ರವಾಹ, ಬೆಲೆ ಏರಿಕೆ ಎಲ್ಲದರಿಂದಾಗಿ ತತ್ತರಿಸಿರುವ ಜನರ ಬವಣೆಯನ್ನು ನೋಡಿ, ಜನರು ಉಸಿರಾಡಲು ಅವಕಾಶ ಮಾಡಿಕೊಡೋಣ ಎಂದು ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದ್ದೇವೆ ಎಂದು ಹೇಳಿದರು.

ನಮ್ಮ ವಿರೋಧಿಗಳು ಇದಕ್ಕೆ ಏನೆಲ್ಲ ಹೇಳಿದರು, ಯೋಜನೆ ಜಾರಿಯಾಗುವುದೇ ಇಲ್ಲ ಎಂದರು, ಬಿಟ್ಟಿ ಯೋಜನೆ ಎಂದು ಕರೆದು ಬಡ ಜನರನ್ನು ಅವಮಾನಿಸಿದರು. ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಜನರಲ್ಲಿ ಭಯ ಮೂಡಿಸಲು ಪ್ರಯತ್ನಿಸಿದರು. ಆದರೆ, ಅಧಿಕಾರಕ್ಕೆ ಬಂದ ಮರುಕ್ಷಣವೇ ಜನರಿಗೆ ಕೊಟ್ಟ ಭಾಷೆಯಂತೆ ಯೋಜನೆ ಜಾರಿಗೆ ತಂದಿದ್ದೇವೆ, ಅತ್ಯಂತ ಸಮರ್ಥವಾಗಿ ಮುಂದುವರಿಸಿಕೊಂಡು ಬರುತ್ತಿದ್ದೇವೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದರು.

### ಶೀಘ್ರದಲ್ಲೇ ಸರ್ಕಾರದ 6ನೇ ಗ್ಯಾರಂಟಿ ಘೋಷಣೆ: ಸಚಿವೆ ಹೆಬ್ಬಾಳ್ಕರ್

ರಾಮನಗರ: ಶೀಘ್ರದಲ್ಲೇ ಸರ್ಕಾರದ 6ನೇ ಗ್ಯಾರಂಟಿ ಘೋಷಣೆ ಮಾಡಲಾಗುವುದು. ಈ ಬಗ್ಗೆ ಸಿಎಂ, ಡಿಸಿಎಂ ಜೊತೆ ಚರ್ಚಿಸಲಾಗುವುದು ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದರು.

ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಆರ್ಥಿಕ ಸ್ಥಿತಿ ಮತ್ತಷ್ಟು ಸುಧಾರಿಸಿದೆ, ಜನರ ಜೀವನ ಮಟ್ಟ ಮೇಲಕ್ಕೇರಿದೆ ಎಂದು ಸಮೀಕ್ಷೆಗಳಿಂದ ತಿಳಿದುಬಂದಿದೆ. ನಮ್ಮ ಗ್ಯಾರಂಟಿ ಯೋಜನೆಗಳ ಅಡಿಯಲ್ಲಿ ಪ್ರತಿ ತಿಂಗಳು ಸರಾಸರಿ ನಾಲ್ಕೂವರೆ ಸಾವಿರ ಕೋಟಿ ರೂ. ಬಿಡುಗಡೆ ಮಾಡಲಾಗುತ್ತಿದೆ. ವರ್ಷಕ್ಕೆ 54 ಸಾವಿರ ಕೋಟಿ ರೂ.ಗಳನ್ನು ನಾವು ಜನರಿಗಾಗಿ ನೇರವಾಗಿ ಬಿಡುಗಡೆ ಮಾಡುತ್ತಿದ್ದೇವೆ. ಕೇವಲ ನನ್ನ ಇಲಾಖೆಯ ಗೃಹಲಕ್ಷ್ಮೀ ಯೋಜನೆಗಾಗಿಯೇ ವರ್ಷಕ್ಕೆ 28 ಸಾವಿರ ಕೋಟಿ ರೂಪಾಯಿ ಒದಗಿಸಲಾಗಿದೆ ಎಂದು ಸಚಿವೆ ಹೇಳಿದರು.

ಸಣ್ಣ ಪುಟ್ಟದ್ದಕ್ಕೆಲ್ಲ ಗಂಡನ ಎದುರು, ಮಕ್ಕಳ ಎದುರು ಕೈ ಚಾಚುವಂತಹ ಸ್ಥಿತಿಯಿಂದ ಮಹಿಳೆಯರನ್ನು ಪಾರು ಮಾಡಿದ್ದೇವೆ. ಮುಂದಿನ ದಿನಗಳಲ್ಲೂ ಕಾಂಗ್ರೆಸ್ ಪಕ್ಷಕ್ಕೆ ಆಶೀರ್ವದಿಸಿ ಎಂದರು.

**ಬದ್ಧತೆ ವುಳ್ಳ ಓರ್ವ ಸಂಸದ ಡಿ.ಕೆ.ಸುರೇಶ್**

ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸಂಸದ ಡಿ.ಕೆ.ಸುರೇಶ್ ಬದ್ಧತೆ ಹಾಗೂ ಓರ್ವ ಕ್ರಿಯಾಶೀಲ ಜನ ಪ್ರತಿನಿಧಿ ಎಂದು ಹೆಬ್ಬಾಳಕರ್ ಹೇಳಿದರು.

ಮುಂದಿನ ಚುನಾವಣೆಯಲ್ಲೂ ಡಿ.ಕೆ.ಸುರೇಶ್ ಅವರನ್ನು ಆರಿಸಿ ಕಳುಹಿಸಿ ಎಂದು ವಿನಂತಿಸಿದರು. ಕಾಂಗ್ರೆಸ್ ಎಂದರೆ ನುಡಿದಂತೆ ನಡೆಯುವ ಪಕ್ಷ, ಕೊಟ್ಟ ಭಾಷೆಗೆ ತಪ್ಪದ ಪಕ್ಷ, ನಮ್ಮ ಜೊತೆ ನೀವಿರಿ, ನಿಮ್ಮ ಜೊತೆಗೆ ನಾವಿರುತ್ತೇವೆ ಎಂದು ಹೇಳಿದರು.

ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸಂಸದ ಡಿ.ಕೆ.ಸುರೇಶ್, ಮಾಗಡಿ ಕ್ಷೇತ್ರದ ಶಾಸಕ ಎಚ್.ಸಿ.ಬಾಲಕೃಷ್ಣ, ವಿಧಾನ ಪರಿಷತ್ ಸದಸ್ಯ ಎಸ್.ರವಿ, ಮಾಜಿ ಶಾಸಕ ರಾಜು, ಕೆಪಿಸಿಸಿ ವಕ್ತಾರ ನಿಕೇತ್ ರಾಜ್ ಮೌರ್ಯ, ವಿವಿಧ ಇಲಾಖೆಯ ಅಧಿಕಾ–ರಿಗಳು, ಅಪಾರ ಸಂಖ್ಯೆಯ ಮಹಿಳೆಯರು ಸಮಾವೇಶಕ್ಕೆ ಸಾಕ್ಷಿಯಾದರು.

## ಬೆಳಗಾವಿಯಲ್ಲಿ ಮತ್ತೆ ಜೈ ಮಹಾರಾಷ್ಟ್ರ ಚೌಕ ಧ್ವಜ ಹಾರಾಟ




ಬೆಳಗಾವಿ: ಬೆಳಗಾವಿಯ ಅನಗೋಳ ಗ್ರಾಮದಲ್ಲಿ ಅನೇಕ ವರ್ಷಗಳಿಂದ ಎಂಇಎಸ್ ಕಾರ್ಯಕರ್ತರು ಜೈ ಮಹಾರಾಷ್ಟ್ರ ಚೌಕ್ ಫಲಕ ಹಾಕಿ, ಅದರ ಮೇಲೆ ಭಗವಾ ಧ್ವಜ ಹಾರಿಸಿದ್ದಾರೆ.

ಇದನ್ನು ತೆರವುಗೊಳಿಸುವಂತೆ ಕನ್ನಡಪರ ಸಂಘಟನೆಗಳು ಅನೇಕ ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನ ಆಗಿಲ್ಲ. ಇದರಿಂದ ಆಕ್ರೋಶಗೊಂಡ ಕನ್ನಡ ಪರ ಸಂಘಟನೆಯ ಕಾರ್ಯಕರ್ತರು ಪಾಲಿಕೆ ಮುಂಭಾಗದಲ್ಲಿ ಧರಣಿ ನಡೆಸಿದರು.

ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗಿದವರ ವಿರುದ್ಧ ಪ್ರಕರಣ ದಾಖಲಾಗುತ್ತದೆ. ಆದರೆ ಬೆಳಗಾವಿಯಲ್ಲಿ ಅನ್ಯ ರಾಜ್ಯದ ಪರ ಫಲಕ ಅಳವಡಿಸುವವರ ವಿರುದ್ಧ ಯಾಕೆ ಕ್ರಮ ತೆಗೆದುಕೊಳ್ಳು ವುದಿಲ್ಲ?. ನಿಮಗೆ ಕನ್ನಡ ಅಭಿಮಾನ ಇದೆಯೋ, ಇಲ್ಲವೋ..? ನಿಮ್ಮ ಜೊತೆ ನಾವು ಬರುತ್ತೇವೆ. ಆ ಫಲಕ ತೆಗೆಯೋಣ ಬನ್ನಿ ಎಂದು ಹೋರಾಟಗಾರರು ಆಗ್ರಹಿಸಿದರು.

## ಸೈಬರ್ ಖದೀಮರ ಮಟ್ಟ ಹಾಕಲು ಪೊಲೀಸ್ ಇಲಾಖೆಯಿಂದ ದಿಟ್ಟ ಕ್ರಮ: ಡಾ. ಅಲೋಕ್ ಮೋಹನ್



ಬೆಂಗಳೂರು: ಪ್ರತಿದಿನ ನಾವೆಲ್ಲಾ ಟೆಕ್ನಾಲಜಿ ಮೇಲೆ ಹೆಚ್ಚು, ಹೆಚ್ಚು ಅವಲಂಬನೆ ಆಗಿದ್ದೇವೆ. ಇದು ಸೈಬರ್ ಅಪರಾಧಿಗಳಿಗೆ ವಂಚನೆ ಮಾಡಲು ಹೆಚ್ಚು ಸಹಕಾರಿ ಆಗಿದೆ. ಕಳೆದ 3 ವರ್ಷದಲ್ಲಿ ಕರ್ನಾಟಕದಲ್ಲೂ ಸೈಬರ್ ಅಪರಾಧಗಳ ಸಂಖ್ಯೆ ಹೆಚ್ಚಾಗಿದೆ.

ಹೀಗಾಗಿ ಕರ್ನಾಟಕ ಪೊಲೀಸ್ ಇಲಾಖೆ ಸೈಬರ್ ಕ್ರಿಮಿನಲ್ಸ್‌ಗಳನ್ನು ಮಟ್ಟ ಹಾಕಲು ಹಲವಾರು ದಿಟ್ಟ ಕ್ರಮಗಳನ್ನು ಕೈಗೊಂಡಿದೆ ಎಂದು ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಅಲೋಕ್ ಮೋಹನ್ ಹೇಳಿದ್ದಾರೆ.

ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಅಲೋಕ್ ಮೋಹನ್ ಅವರು ಭಾಗಿಯಾಗಿದ್ದರು. ಸೈಬರ್ ಕ್ರೈಮ್ ಮತ್ತು ಕರ್ನಾಟಕ ಪೊಲೀಸ್ ವಿಷಯದ ಕುರಿತು ಡಾ.ಅಲೋಕ್ ಮೋಹನ್ ಅವರು ಮಹತ್ವದ ಮಾಹಿತಿಯನ್ನು ಹಂಚಿಕೊಂಡರು.

ಕರ್ನಾಟಕ ಪೊಲೀಸ್ ಇಲಾಖೆ ಸಾಕಷ್ಟು ಹೈಪ್ರೊಫೈಲ್ ಕೇಸ್‌ಗಳನ್ನ ಬಗೆಹರಿಸಿದೆ. ವಿಶೇಷವಾಗಿ ಸೈಬರ್ ಪ್ರಕರಣಗಳನ್ನು ಬಗೆಹರಿಸಲು 31 ಸಾವಿರಕ್ಕೂ ಹೆಚ್ಚು ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ. ಸೈಬರ್ ಅಪರಾಧಗಳ ಬಗ್ಗೆ ಸಾವರ್ಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಜಾಗೃತಿ ಜೊತೆಗೆ ಸೈಬರ್ ಕ್ರಿಮಿನಲ್ಸ್‌ಗಳ ವಿರುದ್ಧ ಕಾನೂನು ಜಾ–ರಿಗೊಳಿಸಲಾಗಿದೆ ಎಂದು ಡಾ.ಅಲೋಕ್ ಮೋಹನ್ ತಿಳಿಸಿದ್ದಾರೆ.

## ಜಾತಿ ಗಣತಿ ವರದಿ ಸ್ವೀಕರಿಸಿದ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಬಹು ನಿರೀಕ್ಷಿತ ಹಾಗೂ ರಾಜ್ಯ ರಾಜಕೀಯದಲ್ಲಿ ಸಾಕಷ್ಟು ಕಿಚ್ಚು ಹಚ್ಚಿದ್ದ ಜಾತಿ ಗಣತಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಕೆ ಮಾಡಲಾಗಿದೆ. ಶಾಶ್ವತ ಹಿಂದುಳಿದ ಆಯೋಗಗಳ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರು ಜಾತಿ ಗಣತಿ ವರದಿಯನ್ನು ಸಿಎಂ ಸಿದ್ದರಾಮಯ್ಯ ಅವರಿಗೆ ಸಲ್ಲಿಕೆ ಮಾಡಿದ್ದಾರೆ.

ವಿಧಾನಸೌಧದಲ್ಲಿ ಸಿಎಂಗೆ ಜಾತಿ ಗಣತಿ ವರದಿ ಸಲ್ಲಿಸಿದ ಬಳಿಕ ಮಾತನಾಡಿದ ಜಯಪ್ರಕಾಶ್ ಹೆಗ್ಡೆ ಅವರು 2014–15ರಲ್ಲಿ ದತ್ತಾಂಶ ಸಂಗ್ರಹ ಮಾಡಿದ್ದ ವರದಿಯನ್ನು ಸಿಎಂಗೆ ಸಲ್ಲಿಸಿದ್ದೇವೆ. ಸಿಎಂ ಮುಂದಿನ ಸಂಪುಟ ಸಭೆಯಲ್ಲಿ ವರದಿಯನ್ನು ಇಡುವುದಾಗಿ ಹೇಳಿದ್ದಾರೆ. ನಾವು ವರದಿ ಸರ್ಕಾರಕ್ಕೆ ನೀಡಿದ್ದೇವೆ. ಮುಂದಿನ ಬೆಳವಣಿಗೆ ಬಗ್ಗೆ ಸರ್ಕಾರ ನಿರ್ಧಾರ ಮಾಡುತ್ತೆ. ಸಂಪೂರ್ಣ ವರದಿ ಓದದೆ ಜಾತಿಗಣತಿ




ವರದಿ ಅವೈಜ್ಞಾನಿಕ ಅನ್ನೋದು ಸರಿಯಲ್ಲ. ಈ ವರದಿಯಲ್ಲಿ ಎಲ್ಲಾ ಸದಸ್ಯರ ಸಹಿ ಇದೆ. ಇದು ಕಾಂತರಾಜ್ ವರದಿಗೆ ಉತ್ತರ ನೀಡುವ ವರದಿಯಾಗಿದೆ ಎಂದು ಜಯಪ್ರಕಾಶ್ ಹೆಗ್ಡೆ ತಿಳಿಸಿದ್ದಾರೆ.

ಸಚಿವ ಶಿವರಾಜ್ ತಂಗಡಗಿ ಅವರು ಇದು ಜಾತಿ ಗಣತಿ ವರದಿ ಅಲ್ಲ ಸಾಮಾಜಿ–ಕ ಮತ್ತು ಶೈಕ್ಷಣಿಕ ಹಾಗೂ ಆರ್ಥಿಕ ವರದಿ. ಈ ವರದಿಗೆ ಯಾರದ್ದು ವಿರೋಧ ಇಲ್ಲ. ಈಗ ವರದಿ ಸ್ವೀಕಾರ ಮಾಡ್ತೀವಿ. ಅದ್ರಲ್ಲಿ ಏನ್ ಮಾಹಿತಿ ಇದೆ ಗೊತ್ತಿಲ್ಲ. ವರದಿಯನ್ನು ಯಾರು ನೋಡಿಲ್ಲ ಈಗ ಸಲ್ಲಿಕೆಯಾಗ್ತಿದೆ ಹೀಗಾಗಿ ಅಸಮಾಧಾನ ಪ್ರಶ್ನೆ ಇಲ್ಲ ಎಂದು ಹೇಳಿದರು.

ಇದೇ ವೇಳೆ ಕಾಂಗ್ರೆಸ್ ಶಾಸಕ ಪುಟ್ಟರಂಗ ಶೆಟ್ಟಿ ಅವರು, ಈ ಹಿಂದೆ ಹೆಚ್.ಡಿ ಕುಮಾರಸ್ವಾಮಿಯವರು ಸ್ವೀಕರಿಸಿರಲಿಲ್ಲ. ಇದೀಗ ಸಿದ್ದರಾಮಯ್ಯ ಸರ್ಕಾರಕ್ಕೆ ವರದಿ ಸಲ್ಲಿಕೆ ಮಾಡಿದ್ದಾರೆ. ಈಗಲಾದ್ರೂ ಒಬಿಸಿ ಸಮುದಾಯಗಳಿಗೆ ನ್ಯಾಯ ಸಿಗಲಿ ಎಂದಿದ್ದಾರೆ.

## ಬೆಳಗಾವಿಗೆ: ಖಾಸಗಿ ಬಸ್ ಪಲ್ಟಿ: ಹಲವರಿಗೆ ಗಾಯ



ಬೆಳಗಾವಿ: ಹೈದರಾಬಾದ್‌ನಿಂದ ಬೆಳಗಾವಿಗೆ ತೆರಳುತ್ತಿದ್ದ ಖಾಸಗಿ ಬಸ್ ಬೊಲೆರೊ ವಾಹನಕ್ಕೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸುವ ಭರದಲ್ಲಿ ಬಸ್ ಪಲ್ಟಿಯಾಗಿ ಹಲವು ಪ್ರಯಾಣಿಕರು ಗಂಭೀರಗೊಂಡಿರುವ ಘಟನೆ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಹೇಮಗುಡ್ಡ ಬಳಿ ನಡೆದಿದೆ.

ಹೈದರಾಬಾದ್‌ನಿಂದ ಬೆಳಗಾವಿಗೆ ತೆರಳುತ್ತಿದ್ದ ಖಾಸಗಿ ಬಸ್ ಬೊಲೆರೊ ವಾಹನಕ್ಕೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸುವ ಭರದಲ್ಲಿ ಪಲ್ಟಿಯಾಗಿದೆ. ಗಾಯಾಳುಗಳನ್ನು ಗಂಗಾವತಿ ಮತ್ತು ಕೊಪ್ಪಳ ಸರಕಾರಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಸದ್ಯ ಚಿಕಿತ್ಸೆ ನೀಡಲಾಗುತ್ತಿದೆ. ಬಸ್ಸಿನಲ್ಲಿ ಸುಮಾರು 50ಕ್ಕೂ ಹೆಚ್ಚು ಪ್ರಯಾಣಿಕರಿದ್ದು ಹಲವರಿಗೆ ತೀವ್ರ ಗಾಯಗಳಾಗಿವೆ, ಕೆಲವರನ್ನು ಗಂಗಾವತಿ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗಂಗಾವತಿ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಸುಸಜ್ಜಿತ ವಸತಿ ಗೃಹಗಳ ಸಮುಚ್ಚಯ ನಿರ್ಮಾಣ: ಸಚಿವ ಸತೀಶ್ ಜಾರಕಿಹೊಳಿ



ಬೆಂಗಳೂರು: ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ವೃಂದಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರದಿಂದ ಸುಸಜ್ಜಿತ ವಸತಿ ಗೃಹಗಳ ಸಮುಚ್ಚಯ ನಿರ್ಮಿಸಿಕೊಡಲಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಬೆಂಗಳೂರಿನ ಜೀವನ್ ಭೀಮಾನಗರದಲ್ಲಿ ಲೋಕೋಪಯೋಗಿ ಇಲಾಖೆಯ ಗ್ರುಪ್ ಎ ಅಧಿಕಾರಿಗಳಿಗೆ ಅಂದಾಜು 27 ಕೋಟಿ ರೂ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ವಸತಿ ಗೃಹಗಳನ್ನು ಗುರುವಾರ ಉದ್ಘಾಟಿಸಿ ಮಾತನಾಡಿದ ಅವರು, ಇಲಾಖೆಯ ಅಧಿಕಾರಿಗಳು ಮತ್ತು ಅವರ ಕುಟುಂಬದವರು ನೆಮ್ಮದಿ ಜೀವನ ಕಳೆಯಲು ಗುಣಮಟ್ಟದ ಮತ್ತು ಸುಸಜ್ಜಿತ ವಸತಿ ಗೃಹಗಳ ಸಮುಚ್ಚಯ ನಿರ್ಮಿಸಲಾಗಿದೆ ಎಂದರು.

ಈ ವೇಳೆ ಸಚಿವರ ವಿಶೇಷ ಕರ್ತವ್ಯ ಅಧಿಕಾರಿ ವಿ.ಎನ್.ಪಾಟೀಲ, ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ, ಮುಖ್ಯ ಅಭಿಯಂತರ ದುರ್ಗಪ್ಪ, ಮಾಜಿ ಶಾಸಕ ಎಸ್.ಬಿ.ಘಾಟಗೆ ಮತ್ತಿತರರು ಉಪಸ್ಥಿತರಿದ್ದರು.

## ಸೇನಾ ಪರೀಕ್ಷೆಯಲ್ಲಿ ಫೇಲ್ ಆಗಿದ್ದಕ್ಕೆ ಮನನೊಂದು ಯುವಕ ನೇಣಿಗೆ ಶರಣು



ಚಿಕ್ಕಮಗಳೂರು: ಸೇನೆ ಪರೀಕ್ಷೆಯಲ್ಲಿ ಫೇಲ್ ಆಗಿದ್ದಕ್ಕೆ ಯುವಕ ಆತ್ಮಹತ್ಯೆ ಮಾಡಿಕೊಂಡ ಘಟನೆ ಶೃಂಗೇರಿ ತಾಲೂಕಿನ ಕಿಗ್ಗಾ ಸಮೀಪದ ಯಡದಾಳು ಗ್ರಾಮದಲ್ಲಿ ನಡೆದಿದೆ. ಕಾರ್ತಿಕ್ (23) ಆತ್ಮಹತ್ಯೆ ಮಾಡಿಕೊಂಡ ಯುವಕ.

ಭಾರತೀಯ ಸೇನೆಯ ಪರೀಕ್ಷೆಯಲ್ಲಿ ಫೇಲ್ ಆಗಿದ್ದೇನೆ. ಇದನ್ನು ಮನೆಯವರಿಗೆ ಹೇಳುವ ಧೈರ್ಯ ನನ್ನ ಬಳಿ ಇಲ್ಲ. ಡೆತ್ ನೋಟ್ ಬರೆದಿಟ್ಟು ಕಾರ್ತಿಕ್ ನೇಣಿಗೆ ಶರಣಾಗಿದ್ದಾನೆ.

ಕಾರ್ತಿಕ್ ಸೇನೆಗೆ ಸೇರಬೇಕೆಂದು 2 ವರ್ಷದಿಂದ ನಿರಂತರ ಪ್ರಯತ್ನಿಸುತ್ತಿದ್ದ. ಸೇನಾ ನೇಮಕಾತಿ ಪರೀಕ್ಷೆಯ ರಿಸಲ್ಟ್ ಬಂದ ಹಿನ್ನಲೆ ಆತ್ಮಹತ್ಯೆ ಮಾಡಿಕೊಂಡಿದ್ದಾನೆ

ಶೃಂಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲೂಕಿನಲ್ಲಿ ಘಟನೆ ಬೆಳಕಿಗೆ ಬಂದಿದೆ.

## ಬೆಳಗಾವಿಯಲ್ಲಿ ಮತ್ತೊಂದು ಘಟನೆ

### ಮಹಿಳೆಯನ್ನು ವಿವಸ್ತ್ರಗೊಳಿಸಿ ಮಾರಣಾಂತಿಕ ಹಲ್ಲೆ ಆರೋಪ



ಬೆಳಗಾವಿ: ಮಹಿಳೆಯನ್ನು ವಿವಸ್ತ್ರಗೊಳಿಸುವ ಜೊತೆಗೆ ಆಕೆಯ ಪುತ್ರನ ಮೇಲೂ ಮಾರಣಾಂತಿಕ ಹಲ್ಲೆ ಮಾಡಿರುವ ಆರೋಪವೊಂದು ಜಿಲ್ಲೆಯ ಕಾಗವಾಡದ ಐನಾಪುರ ಗ್ರಾಮದಲ್ಲಿ ಕೇಳಿಬಂದಿದೆ.

ಬೆಳಗಾವಿಜಿಲ್ಲೆಯ ಕಾಗವಾಡದ ಐನಾಪುರ ಗ್ರಾಮದಲ್ಲಿ ಒತ್ತುವರಿ ಪ್ರಶ್ನಿಸಿದ ಬಡ ಕುಟುಂಬದ ಮೇಲೆ ದೌರ್ಜನ್ಯ ಎಸಗಲಾಗಿದೆ. ರಾಮಪ್ಪಗೆ ಎಂಬವರಿಗೆ 1991ರಲ್ಲಿ ಸರ್ಕಾರ 3 ಎಕರೆ ಜಮೀನು ನೀಡಿತ್ತು.

ಆ ಬಳಿಕದಿಂದ ರಾಮಪ್ಪ ಇದೇ ಜಮೀನಿನಲ್ಲಿ ಉಳುಮೆ ಮಾಡಿಕೊಂಡು ಜೀವನ ನಡೆಸುತ್ತಿದ್ದರು. ಆದರೆ ಕೆಲ ದಿನಗಳ ಬಳಿಕ ರಾಮಪ್ಪಗೆ ಸೇರಿದ ಜಮೀನಿನ 20 ಗುಂಟೆಯನ್ನು ಒತ್ತುವರಿ ಮಾಡಿದ್ದಾರೆ.

ಐನಾಪುರದ ಸುಭಾಷ್ ದಾನೊಳ್ಳಿ, ಸುರೇಶ ದಾನೊಳ್ಳಿ, ಮಾಯಪ್ಪ ಹಳ್ಯಾಳ ವಿರುದ್ಧ ಒತ್ತುವರಿ ಆರೋಪ ಕೇಳಿಬಂದಿದೆ.

ನಮಗೆ ರಾಜಕೀಯ ನಾಯಕರ ಸಂಪರ್ಕ ಇದೆ ಎಂದು ಹೇಳಿ ದಬ್ಬಾಳಿಕೆ ಮಾಡುತ್ತಿದ್ದಾರೆ. ಜಮೀನು ಜೊತೆ ರಸ್ತೆಗೆ ಮೀಸಲಿಟ್ಟ ಜಾಗವೂ ಒತ್ತುವರಿ ಮಾಡಿದ್ದಾರೆ.

ಈ ಒತ್ತುವರಿ ಪ್ರಶ್ನಿಸಲು ಹೋಗಿದ್ದ ಪತ್ನಿ ಜಯಶ್ರೀ ಜೊತೆಗೆ ಅಸಭ್ಯ ವರ್ತನೆ ತೋರಿದ್ದಾರೆ. ಅಲ್ಲದೇ ಅವಾಚ್ಯ ಶಬ್ಧಗಳಿಂದ ನಿಂದಿಸುವ ಜೊತೆಗೆ ವಿವಸ್ತ್ರಗೊಳಿಸಿ ವಿಕೃತಿ ಮೆರೆಯುವುದರ ಜೊತೆಗೆ ಪುತ್ರ ಮುರಾರಿ ಮೇಲೂ ಮಾರಣಾಂತಿಕ ಹಲ್ಲೆಗೈದಿರುವ ಆರೋಪವನ್ನು ರಾಮಪ್ಪ ಮಾಡಿದ್ದಾರೆ.

## ಪಿಕಪ್ ವಾಹನ ಪಲ್ಟಿ; 14 ಜನ ಸ್ಥಳದಲ್ಲೇ ಸಾವು



ಡಿಂಡೋರಿ: ಮಧ್ಯಪ್ರದೇಶದ ದಿಂಡೋರಿ ಜಿಲ್ಲೆಯಲ್ಲಿ ಗುರುವಾರ ಮುಂಜಾನೆ ಪಿಕ್‌ಅಪ್ ವಾಹನವೊಂದು ಪಲ್ಟಿಯಾದ ಪರಿಣಾಮ ಅದರಲ್ಲಿ ಪ್ರಯಾಣಿಸುತ್ತಿದ್ದ 14 ಮಂದಿ ಸಾವನ್ನಪ್ಪಿದ್ದು, 20 ಮಂದಿ ಗಾಯಗೊಂಡಿದ್ದಾರೆ.

ಬೆಳಗಿನ ಜಾವ 1.30ರ ಸುಮಾರಿಗೆ ಬಡ್ಜರ್ ಘಾಟ್ ಬಳಿ ವಾಹನದ ಚಾಲಕನ ನಿಯಂತ್ರಣ ತಪ್ಪಿ ಈ ಅಪಘಾತ ಸಂಭವಿಸಿದೆ. ಇದರಿಂದ 14 ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸುಮಾರು 20 ಮಂದಿ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮೃತರು ಡಿಂಡೋರಿ ಜಿಲ್ಲೆಯ ಶಹಪುರ ಬ್ಲಾಕ್ನಲ್ಲಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲು ಅಮ್ಯೈ ದೇವ್ರಿ ಗ್ರಾಮಕ್ಕೆ ತೆರಳಿ ಹಿಂತಿರುಗುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ಘಟನೆಯ ಬಗ್ಗೆ ಮಾಹಿತಿ ಪಡೆದ ಕೂಡಲೇ ದಿಂಡೋರಿ ಕಲೆಕ್ಟರ್ ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಹಾರ ಕಾರ್ಯದಲ್ಲಿ ತೊಡಗಿದ್ದಾರೆ. ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ಘಟನೆಯ ಬಗ್ಗೆ ಸಂತಾಪ ವ್ಯಕ್ತಪಡಿಸಿದ್ದಾರೆ ಮತ್ತು ಮೃತರ ಕುಟುಂಬಕ್ಕೆ ತಲಾ 4 ಲಕ್ಷ ರೂಪಾಯಿ ನೆರವು ಘೋಷಿಸಿದ್ದಾರೆ.

# ಸಿಎಂ ಬಜೆಟ್ ಉತ್ತರದ ವೇಳೆ ವಿಪಕ್ಷ ಧರಣಿ; ಸಭಾತ್ಯಾಗ

ಬೆಂಗಳೂರು: ವಿಧಾನಸೌಧದಲ್ಲಿ ಪಾಕಿ ಸ್ತಾನದ ಪರ ಘೋಷಣೆ ಕೂಗಿದವರನ್ನು ಬಂಧಿಸಬೇಕು. ಆ ಘಟನೆಯ ನೈತಿಕ ಹೊಣೆ ಹೊತ್ತು ಸರ್ಕಾರ ರಾಜೀನಾಮೆ ನೀಡಬೇಕೆಂದು ವಿಧಾನಸಭೆಯಲ್ಲಿ ನಡೆಸಿದ ಪ್ರತಿಭಟನೆಯನ್ನು ಗುರುವಾರ ಮುಂದುವರೆಸಿದ ಬಿಜೆಪಿ ಶಾಸಕರು, ಕಾಗಪತ್ರಗಳನ್ನು ಹರಿದು ತೂರಿ, ಸರ್ಕಾರದ ವಿರುದ್ಧ ಕೆಲಕಾಲ ಘೋಷಣೆ ಕೂಗಿ ಸಭಾತ್ಯಾಗ ಮಾಡಿದರು.

ಗುರುವಾರ ಬೆಳಗ್ಗೆ ಸದನ ಸಮಾವೇಶಗೊಂಡಾಗ ಬಿಜೆಪಿಯ ಶಾಸಕರು ಸಭಾಧ್ಯಕ್ಷರ ಪೀಠದ ಮುಂದಿನ ಬಾವಿಯಲ್ಲಿ ಧರಣಿ ಮುಂದುವರೆಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಇಡೀ ಪ್ರಪಂಚವೇ ನಮ್ಮ ಕಡೆ ನೋಡುತ್ತಿದೆ. ಆದ–ರೂ ದೇಶದ್ರೋಹಿಗಳ ಮೇಲೆ ಯಾವ ಕ್ರಮವನ್ನೂ ಕೈಗೊಂಡಿಲ್ಲ. ಯಾರನ್ನೂ ಬಂಧಿಸಿಲ್ಲ.



ಸರ್ಕಾರ ಮೌನವಾಗಿದೆ. ಹೀಗಾದರೆ ರಾಜ್ಯದ ಜನತೆಗೆ ಯಾವ ಸಂದೇಶ ರವಾನೆಯಾಗುತ್ತದೆ. ರಕ್ಷಣೆ ಕೊಡಲಿ ಎಂಬ ಉದ್ದೇಶದಿಂದ ನಮ್ಮನ್ನು ಆಯ್ಕೆ ಮಾಡಿ ಕಳುಹಿಸಿದ್ದಾರೆ. ವಿಧಾನಸೌಧ ಉಗ್ರರ ತಾಣವಾಗಲು ಬಿಡಬೇಕಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, ಈ ವಿಚಾರದ ಬಗ್ಗೆ ನಿನ್ನೆ ಚರ್ಚೆಯಾಗಿದೆ. ಸರ್ಕಾರವು ಉತ್ತರ ಕೊಟ್ಟಿದೆ. ಘಟನೆ ಬಗ್ಗೆ ತನಿಖೆ ಕೈಗೊಂಡಿರುವುದಾಗಿ ಹೇಳಿದೆ. ಬಜೆಟ್ ಮೇಲಿನ ಚರ್ಚೆಗೆ ಮುಖ್ಯಮಂತ್ರಿಗಳು ಉತ್ತರ ಕೊಡುತ್ತಾರೆ. ಧರಣಿ ಕೈಬಿಟ್ಟು ಸುಗಮ ಕಲಾಪಕ್ಕೆ ಸಹಕಾರ ಕೊಡಬೇಕು ಎಂದರು. ಆಗ ಆರ್.ಅಶೋಕ್ ಅವರು, ಕೋಲಾರದಲ್ಲಿ ಈ ಹಿಂದೆ ದಲಿತರನ್ನು ಸುಟ್ಟು ಹಾಕಿದರು. ಆಗ ಗೃಹಸಚಿವರಾಗಿದ್ದ ಮಲ್ಲಿಕಾರ್ಜುನ ಖರ್ಗೆ ಅವರು ಸಭೆಯಲ್ಲಿ ಕಣ್ಣೀರು ಹಾಕಿದರು. ಅದು ಅವರ ಕಳಕಳಿ. ಆದರೆ ಈ ಸರ್ಕಾರಕ್ಕೆ ಯಾವುದೇ ಜವಾಬ್ದಾರಿ ಇಲ್ಲ. ನೈತಿಕ ಹೊಣೆ ಹೊತ್ತಿಲ್ಲ ಎಂದು ಆರೋಪಿಸಿದರು.

### 'ವಿಧಾನ ಪರಿಷತ್ತಿ'ನಲ್ಲಿ 2024–25ನೇ ಸಾಲಿನ 'ಧನ ವಿನಿಯೋಗ ವಿಧೇಯಕ' ಅಂಗೀಕಾರ

ಬೆಂಗಳೂರು: ರಾಜ್ಯ ಸರ್ಕಾರದಿಂದ ವಿಧಾನ ಸಭೆಯಲ್ಲಿ 2024–25ನೇ ಸಾಲಿನ ಧನ ವಿನಿಯೋಗ ವಿಧೇಯಕವನ್ನು ಮಂಡಿಸಿ ಅಂಗೀಕಾರ ಪಡೆಯಲಾಗಿತ್ತು. ಈ ಬೆನ್ನಲ್ಲೇ ಗುರುವಾರ ವಿಧಾನ ಪರಿಷತ್ತಿನಲ್ಲಿಯೂ ಮಂಡಿಸಿ ಅಂಗೀಕಾರ ಪಡೆಯಲಾಗಿದೆ.

ಗುರುವಾರ ವಿಪಕ್ಷಗಳ ಗದ್ದಲದ ನಡುವೆಯೂ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು 2024–25ನೇ ಸಾಲಿನ ಧನ ವಿನಿಯೋಗ ವಿಧೇಯಕವನ್ನು ಮಂಡಿಸಿದರು.

# ಶ್ರೀ ಕನಕದುರ್ಗಮ್ಮ ದೇವಸ್ಥಾನ ಸಿಡಿಬಂಡಿ ಮಹೋತ್ಸವ ಅದ್ದೂರಿ ಆಚರಣೆ: ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ

ಬಳ್ಳಾರಿ: ಬರುವ ಮಾ.19 ರಂದು ನಡೆಯಲಿರುವ ಶ್ರೀ ಕನಕದುರ್ಗಮ್ಮ ದೇವಸ್ಥಾನದ ಸಿಡಿಬಂಡಿ ರಥೋತ್ಸವವನ್ನು ಅದ್ದೂರಿಯಾಗಿ ಆಚರಿಸಲು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಸೂಚಿಸಿದರು.

ಶ್ರೀ ಕನಕದುರ್ಗಮ್ಮ ದೇವಸ್ಥಾನದ ಸಿಡಿಬಂಡಿ ಮಹೋತ್ಸವ ಅಂಗವಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಅಧಿದೇವತೆಯ ಮಹೋತ್ಸವವನ್ನು ಸಂಪ್ರದಾಯದಂತೆ ಆಚರಣೆಗೆ ಕ್ರಮ ವಹಿಸಬೇಕು. ಶಿಷ್ಠಾಚಾರದಂತೆ ಎಲ್ಲಾರಿಗೂ ಆಹ್ವಾನಿಸಬೇಕು. ರಥ ಚಕ್ರಗಳನ್ನು ಪರಿಶೀಲಿಸಬೇಕು. ಯಾವುದೇ ರೀತಿಯ ಲೋಪವಾಗದಂತೆ ನೋಡಿಕೊಳ್ಳಬೇಕು ಎಂದು ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ದೇವಸ್ಥಾನದ ನೈರ್ಮಲೀಕರಣಕ್ಕೆ ದೇವಸ್ಥಾನದ ಸುತ್ತಲು ಜಾತ್ರಾ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಹಾಗೂ ಕಸದ ವಿಲೇವಾರಿಯ ಕುರಿತು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಚಿಸಿದರು.

ರಥೋತ್ಸವ ಕಾರ್ಯಕ್ರಮದಲ್ಲಿ ಸುಮಾರು 3 ರಿಂದ 4 ಲಕ್ಷ ಜನರು ಸೇರುವ ಸಾಧ್ಯತೆ ಇದೆ. ಬರುವ ಸಾರ್ವಜನಿಕರು ಮತ್ತು ಭಕ್ತಾಧಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ,



ವಿದ್ಯುತ್ ವ್ಯವಸ್ಥೆ, ಪೊಲೀಸ್ ಬಂದೋಬಸ್ತ್ ನಿಯೋಜಿಸುವಂತೆ ತಿಳಿಸಿದರು.

ಆರೋಗ್ಯದ ವಿಚಾರ ಸಂಬಂಧಿಸಿದಂತೆ ವೈದ್ಯಾಧಿಕಾರಿಗಳ ತಂಡವನ್ನು ರಚಿಸಿ, ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಬೇಕು. ಸಹಾಯವಾಣಿ ಕೇಂದ್ರ ತೆರೆಯಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಗ್ನಿಶಾಮಕದಳ ಸೇವೆ, ಸಾರ್ವಜನಿಕರು ಮತ್ತು ಭಕ್ತಾಧಿಗಳಿಗೆ ಸಾಲಿನಲ್ಲಿ ಬಂದು ದೇವಿಯ ದರ್ಶನ ಪಡೆಯಲು ಬ್ಯಾರಿಕೇಡ್ ಮತ್ತು ಸಿಸಿಟಿವಿ ಕ್ಯಾಮೆರಗಳನ್ನು ಅಳವಡಿಸಬೇಕು ಎಂದು ಹೇಳಿದರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಮಾತನಾಡಿ, ಸಿಡಿಬಂಡಿ ರಥೋತ್ಸವದ ಅಂಗವಾಗಿ ನಗರದ ಪ್ರಮುಖ ವೃತ್ತಗಳಲ್ಲಿ ದೀಪಾಲಂಕಾರ ವ್ಯವಸ್ಥೆ ಮಾಡಬೇಕು. ದೇವಿಯ ದರ್ಶನಕ್ಕೆ ಬರುವ ವಿಐಪಿ ವ್ಯಕ್ತಿಗಳಿಗೆ ನಿಗದಿತ ಸಮಯ ಮೀಸಲಿರಿಸಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರಿಗೆ ತೊಂದರೆಯಾಗಬಾರದು ಎಂದು ಸಲಹೆ ನೀಡಿದರು.

**ಮೋಕಾ ಮುದಿಮಲ್ಲೇಶ್ವರ ದೇವಸ್ಥಾನ ಜಾತ್ರಾ ಮಹೋತ್ಸವ:**

ಬಳ್ಳಾರಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಮೋಕಾ ಗ್ರಾಮದ ಮುದಿ ಮಲ್ಲೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವೂ ಮಾ.02 ರಂದು ನಡೆಯಲಿದ್ದು, ಸಹಸ್ರಾರು ಸಂಖ್ಯೆಯಲ್ಲಿ ಜನರು ಸೇರುತ್ತಾರೆ. ಇದಕ್ಕೆ ಅಗತ್ಯ ಸಿದ್ಧತೆ ಮತ್ತು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಇದೇ ಸಂದರ್ಭದಲ್ಲಿ ಸೂಚಿಸಿದರು.

ಈ ವೇಳೆ ಮಹಾನಗರ ಪಾಲಿಕೆ ಮೇಯರ್ ಬಿ.ಶ್ವೇತ, ಉಪಮೇಯರ್ ಬಿ.ಜಾನಕಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಸಹಾಯಕ ಆಯುಕ್ತ ಹೇಮಂತ್, ತಹಶೀಲ್ದಾರ ಗುರುರಾಜ, ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ, ಗಾಣಿಗ ಸಮುದಾಯದವರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ಮಹಾನಗರ ಪಾಲಿಕೆ ಸದಸ್ಯರುಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ವಿಜ್ಞಾನದಿಂದ ಜೀವನ ಸುಗಮ: ಡಾ.ಸಿ.ನಾಗಭೂಷಣ

ಬಳ್ಳಾರಿ: ಅಸಾಧ್ಯವಾದುದೆಲ್ಲವನ್ನು ಸಾಧ್ಯವಾಗಿಸಿದ್ದು ವಿಜ್ಞಾನ. ವಿಜ್ಞಾನದ ಸಹಾಯದಿಂದ ಜೀವನ ಅತ್ಯದ್ಭುತವೆನಿಸುತ್ತಿದೆ ಎಂದು ವೀರಶೈವ ಕಾಲೇಜಿನ ನಿವೃತ್ತ ಪ್ರಾಧ್ಯಾಪಕರಾದ ಡಾ.ಸಿ.ನಾಗಭೂಷಣ ಅವರು ಹೇಳಿದರು.

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ನವದೆಹಲಿ ಮತ್ತು ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಬೆಂಗಳೂರು ಮತ್ತು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕಿತ್ತೂರು ರಾಣಿ ಚೆನ್ನಮ್ಮ ಬಾಲಕಿರ ಪ್ರೌಢಶಾಲೆಯಲ್ಲಿ ಬುಧವಾರ ಏರ್ಪಡಿಸಿದ್ದ ರಾಷ್ಟ್ರೀಯ ವಿಜ್ಞಾನ ದಿನಾಚರಣೆ–2024 ಕಾರ್ಯಕ್ರಮವನ್ನು ಸಿ.ವಿ.ರಾಮನ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ವಿಜ್ಞಾನ ಜಗತ್ತಿನಲ್ಲಿ ಭಾರತವನ್ನು ಮೇರು ಶಿಖರಕ್ಕೆ ಕೊಂಡೊಯ್ದ ಸರ್ ಸಿ.ವಿ.ರಾಮನ್ ಅವರ ಅಪೂರ್ವ ಸಾಧನೆಗಳ ನೆನಪಿನಲ್ಲಿ ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತದೆ. ಅವರು ನಡೆದು ಬಂದ ದಾರಿ, ಸಾಧನೆಗಳನ್ನು ಹಾಗೂ ಅವರು ಟಾಟಾ ಇನ್ಸಿಟ್ಯೂಟ್ ಅನ್ನು ಕಟ್ಟಿ ಬೆಳೆಸುವಲ್ಲಿ ಅವರ ಪಾತ್ರ ಎಷ್ಟು ದೊಡ್ಡದು ಎಂಬುದನ್ನು ನಾವು ಸ್ಮರಿಸಬೇಕು ಎಂದರು.



ಕೋವಿಡ್–19 ನಲ್ಲಿ ಬಳಲುತ್ತಿದ್ದ ರೋಗಿಗಳಿಗೆ ವ್ಯಾಕ್ಸಿನೇಷನ್ ನೀಡಿ ಮತ್ತು ವಿದೇಶಗಳಿಗೆ ಸರಬರಾಜು ಮಾಡುವಲ್ಲಿ ನಮ್ಮ ದೇಶದ ವಿಜ್ಞಾನಿಗಳು ಮಹತ್ ಸಾಧನೆ ಹೊಂದಿದ್ದಾರೆ. ಅದೇರೀತಿಯಾಗಿ ಚಂದ್ರಯಾನ–3 ಉಡಾವಣೆಯಲ್ಲಿ ಇಸ್ರೋ ಮಹಿಳಾ ವಿಜ್ಞಾನಿಗಳ ಪಾತ್ರವು ಮಹತ್ವವಾಗಿದೆ ಎಂದರು.

ಬಳ್ಳಾರಿಯ ವಿಜ್ಞಾನ ಕೇಂದ್ರವನ್ನು ತೆರೆಯಲು ನನ್ನ ಅಳಿಲು ಸೇವೆ ಇದೆ ಎನ್ನುವುದರ ಬಗ್ಗೆ ನೆನಪು ಮಾಡುತ್ತಾ, ವಿಜ್ಞಾನ ವಸ್ತು ಪ್ರದರ್ಶನದಿಂದ ಮಕ್ಕಳಿಗೆ ತುಂಬಾ ಅನುಕೂಲವಾಗಲಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ನ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ ಅವರು ಮಾತನಾಡಿ, ವಿಜ್ಞಾನ ಒಂದು ಆಸಕ್ತಿದಾಯಕ ವಿಷಯವಾಗಿದ್ದು, ಸತತ ಪ್ರಯತ್ನವಿದ್ದರೆ ವಿಜ್ಞಾನದಲ್ಲಿ ಏನಾದರೂ ಸಾಧಿಸಬಹುದು ಮತ್ತು ವಿಜ್ಞಾನ ಕ್ಷೇತ್ರಕ್ಕೆ ಕೊಡುಗೆ ನೀಡಬಹುದು ಎಂದು ಅಭಿಮತ ವ್ಯಕ್ತಪಡಿಸಿದರು.

ಕಿಷ್ಕಿಂದ ವಿಶ್ವವಿದ್ಯಾಲಯದ ಡೀನ್ಗಳಾದ ಡಾ.ಮಂಜುನಾಥ್.ಎಸ್ ಅವರು ಮಾತನಾಡಿ, ವಿವಿಧ ವಿಜ್ಞಾನ ಕ್ಷೇತ್ರಗಳಲ್ಲಿ ಮಹಿಳೆಯರ ಪಾತ್ರ ತುಂಬಾ ದೊಡ್ಡದು. ವಿದ್ಯಾರ್ಥಿಗಳು ಅರ್ಥಗರ್ಭಿತ ಪ್ರಶ್ನೆಗಳನ್ನು ಹೇಳುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಮತ್ತು ಕಲಿಕೆಯಲ್ಲಿ ಸತತ ಪ್ರಯತ್ನವಿರಬೇಕು ಎಂದು ಕಿವಿಮಾತು ಹೇಳಿದರು.

ಶಾಲೆಯ ಮುಖ್ಯೋಪಾಧ್ಯಾಯರಾದ ಎಂ.ಗಿರಿಜಾ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ವಿಜ್ಞಾನದ ವಿಷಯಗಳನ್ನು ಚೆನ್ನಾಗಿ ಅರ್ಥ ಮಾಡಿಕೊಂಡು, ವಿಜ್ಞಾನದ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು.

ಬಳಿಕ ಬೆಳಕು ಮತ್ತು ಶಬ್ದ ತರಂಗಗಳ ಬಗ್ಗೆ ಉದಾಹರಣೆ ಸಹಿತ ವಿವರಿಸಿದರು. ಆಕಾಶ ಮತ್ತು ಸಮುದ್ರ ನೀಲಿ ಯಾಗಲು ಕಾರಣವೇನು ಎನ್ನುವುದರ ಬಗ್ಗೆ ವಿವರಣೆ ನೀಡಿದರು. ಬಣ್ಣಗಳ ಮಹತ್ವದ ಬಗ್ಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ವಿಜ್ಞಾನ ದಿನಾಚರಣೆಯ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಲಾಯಿತು.

ಇದೇ ಸಂದರ್ಭದಲ್ಲಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಿದರು.

ಈ ವೇಳೆ ಜಿಲ್ಲಾ ಪಂಚಾಯತ್ನ ಯೋಜನಾ ಸಂಯೋಜಕರಾದ (ಎನ್ಆರ್ಡಿಎಂಎಸ್) ರಾಮಚಂದ್ರರೆಡ್ಡಿ ಸೇರಿದಂತೆ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಮತ್ತೀತರರು ಉಪಸ್ಥಿತರಿದ್ದರು.

ಕುಮಾರಿ ಕೆ.ರೇಣುಕಾ ಕಾರ್ಯಕ್ರಮ ನಿರೂಪಿಸಿದರು. ಕುಮಾರಿ ಭೂಮಿಕಾ ವಂದನಾರ್ಪಣೆ ಮಾಡಿದರು.

# ಮನುಷ್ಯನು ಸ್ವಾವಲಂಬಿಯಾಗಲು ಶಿಕ್ಷಣ ಬಹುಮುಖ್ಯ: ನ್ಯಾ.ರಾಜೇಶ್ ಹೊಸಮನಿ

ಬಳ್ಳಾರಿ: ಮನುಷ್ಯನು ಸ್ವಾವಲಂಬಿಯಾಗಿ ಜೀವಿಸಲು ಶಿಕ್ಷಣ ಬಹುಮುಖ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಧೀಶರಾದ ರಾಜೇಶ್.ಎನ್. ಹೊಸಮನಿ ಅವರು ಅಭಿಪ್ರಾಯ ಪಟ್ಟರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ವಿಮ್ಸ್ ವೈದ್ಯ ಭವನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮಕ್ಕಳ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪರಿಶುದ್ಧ ಮನಸುಳ್ಳ ದೇವರ ರೂಪವೇ ಮಕ್ಕಳಾಗಿದ್ದು, ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಭವಿಷ್ಯವನ್ನು ರೂಪಿಸಲು ಶಿಕ್ಷಣ ಒದಗಿಸುವ ಕಾರ್ಯ ಮಾಡಬೇಕು ಎಂದು ಸಲಹೆ ಮಾಡಿದರು.

ಮಕ್ಕಳನ್ನು ಶಿಕ್ಷಣವಂತರಾಗಿಸಬೇಕು. ಡಾ.ಬಿ.ಆರ್. ಅಂಬೇಡ್ಕರ್, ಎ.ಪಿ.ಜೆ ಅಬ್ದುಲ್ ಕಲಾಂ, ಸ್ವಾಮಿ ವಿವೇಕಾನಂದ, ಲಾಲ್ ಬಹದ್ದೂರ್ ಶಾಸ್ತ್ರಿ ಮುಂತಾದ ಮಹಾನ್ ಪುರುಷರ ಜೀವನ ಕಥೆಗಳನ್ನು ಮಕ್ಕಳಿಗೆ ಹೇಳಬೇಕು. ಮಕ್ಕಳಲ್ಲಿ ನಾವೆಲ್ಲರೂ ಒಂದೇ ಎನ್ನುವ ಭಾವನೆ ಮೂಡಿಸಿ, ಸಾಮಾಜಿಕವಾಗಿ ಮಾನಸಿಕವಾಗಿ ಮಗುವನ್ನು ಸಧೃಡರನ್ನಾಗಿ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ಕುಮಾರ್.ಕೆ.ಹೆಚ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳ ಪ್ರತಿಭೆ ಅನಾವರಣಗೊಳ್ಳಲು ಇಂತಹ ವೇದಿಕೆಗಳು ಸಹಕಾರಿಯಾಗಿದ್ದು, ಮಕ್ಕಳಲ್ಲಿರುವ ಕಲೆಯನ್ನು ಅನಾವರಣಗೊಳಿಸಬೇಕು ಎಂದು ಅಭಿಪ್ರಾಯ ಪಟ್ಟರು. ಸಂಗೀತ, ನಾಟಕ ಪ್ರದರ್ಶನ, ಜನಪದ ನೃತ್ಯ, ಕಾವ್ಯ, ಕಥೆ, ಚಿತ್ರಕಥೆ, ಕ್ಲೇ ಮಾಡಲಿಂಗ್ ಸ್ಪರ್ಧೆಗಳಲ್ಲಿ ಮಕ್ಕಳು ಆಸಕ್ತಿಯಿಂದ ಭಾಗವಹಿಸಿ ಪ್ರದರ್ಶನ ನೀಡಿದರು. ಮಕ್ಕಳ ಸಂಸ್ಕೃತಿ ಕಾರ್ಯಕ್ರಮವು ಮನರಂಜನೆ ಭರಿತವಾಗಿತ್ತು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಕಮಲ್ಷಾ ಅಲ್ತಾಫ್ ಅಹಮ್ಮದ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಮಕೃಷ್ಣ ನಾಯಕ.ಎಂ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಯೋಜನಾ ಘಟಕದ ಯೋಜನಾಧಿಕಾರಿ ಮೌನೇಶ್, ಆಶಾ ಕಾರ್ಯಕರ್ತೆಯರು, ಪೋಷಕರು ಸೇರಿದಂತೆ ಮಕ್ಕಳು ಉಪಸ್ಥಿತರಿದ್ದರು.

# ವೈಜ್ಞಾನಿಕ ಮನೋಭಾವ ಹೊಂದುವುದು ಮುಖ್ಯ: ಗಾಯತ್ರಿ ಸಿ ಎಸ್

ಶಿವಮೊಗ್ಗ: ವಿದ್ಯಾರ್ಥಿಗಳು ವೈಜ್ಞಾನಿಕ ದೃಷ್ಟಿಕೋನ ಹೊಂದಿ ಅದೇ ನಿಟ್ಟಿನಲ್ಲಿ ಪ್ರಶ್ನಿಸುವುದರಿಂದ ವೈಜ್ಞಾನಿಕ ಮನೋಭಾವ ಬೆಳಸಿಕೊಳ್ಳಬಹುದು ಎಂದು ಜಿ.ಪಂ ಸಿಪಿಓ ಗಾಯತ್ರಿ ಸಿ.ಎಸ್ ನುಡಿದರು.

ಭಾರತೀಯ ನೋಬಲ್ ಪ್ರಶಸ್ತಿ ವಿಜೇತರಾದ ಭೌತಶಾಸ್ತ್ರಜ್ಞ ಸರ್ ಸಿ.ವಿ. ರಾಮನ್ ಇವರ ರಾಮನ್ ಪರಿಣಾಮದ ಆವಿಗಣ್ಕರವನ್ನು ಗುರುತಿಸಲು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಬೆಂಗಳೂರು, ನ್ಯಾಷನಲ್ ಕೌನ್ಸಿಲ್ ಫಾರ್ ಸೈನ್ಸ್ ಅಂಡ್ ಟೆಕ್ನಾಲಜಿ ಕಮ್ಯುನಿಕೇಷನ್, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಭಾರತ ಸರ್ಕಾರದ ಬೆಂಬಲ ಹಾಗೂ ಜಿಲ್ಲಾ ಪಂಚಾಯತ್ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಹಯೋಗದಲ್ಲಿ ಫೆ. 28 ರಂದು ನಗರದ ಕಸ್ತೂರಿ ಬಾ ಬಾಲಕಿಯರ ಪ್ರೌಢಶಾಲೆಯಲ್ಲಿ ಏರ್ಪಡಿಸಲಾಗಿದ್ದ ರಾಷ್ಟ್ರೀಯ ವಿಜ್ಞಾನ ದಿನಾಚರಣೆನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೈಜ್ಞಾನಿಕ ಮನೋಭಾವ ಹೊಂದುವುದು ಅತ್ಯಂತ ಪ್ರಮುಖವಾಗಿದೆ. ವೈಜ್ಞಾನಿಕವಾಗಿ ವಿಧ್ಯಾರ್ಥಿಗಳು ಯೋಚಿಸಿದಾಗ ಮಾತ್ರ ದೇಶದ ಮುನ್ನಡೆ ಸಾಧ್ಯ . ದೈನಿಂದಿನ ಜೀವನದಲ್ಲಿ ನೆಡೆಯುವ ಸಣ್ಣಪುಟ್ಟ ಕಾರ್ಯದಲ್ಲಿ ವಿಜ್ಞಾನವಿದೆ. ಅದನ್ನು ಗಮನಿಸುವುದು, ವಿಶ್ಲೇಷಿಸುವುದು ಮುಖ್ಯ ಎಂದ ಅವರು ಇಂತಹ ಕಾರ್ಯಕ್ರಮಗಳ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದರು.




ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಉದ್ಯಮಿ ನಿವೇದನ್ ನಿಂಬೆ ಮಾತನಾಡಿ, ದೈನಂದಿನ ಬದುಕಿನಲ್ಲಿ ನಮಗರಿವಿಲ್ಲದಂತೆ ವಿಜ್ಞಾನ ಹೇಗೆ ಹಾಸುಹೊಕ್ಕಾಗಿದೆ ಎಂಬುದನ್ನ ಸಾಂಪ್ರದಾಯಿಕ ವಿಧಾನಗಳನ್ನು ಗಮನಿಸುತ್ತಾ ವಿಜ್ಞಾನವನ್ನು ಅರಿಯುವ ಬಗೆಯನ್ನು ವಿದ್ಯಾರ್ಥಿಗಳಿಗೆ ಎಳೆ ಎಳೆಯಾಗಿ ತಿಳಿಸಿದರು.

ಶಿವಮೊಗ್ಗ ಕ್ಷೇತ್ರ ಶಿಕ್ಷಣಾಧಿಕಾರಿ ನಾಗರಾಜ್ ಮಾತನಾಡಿ, ಸ್ಥಳೀಯ ತಂತ್ರಜ್ಞಾನದಿಂದ ಉತ್ಪಾದಿಸಿದ ಉತ್ಪನ್ನಗಳನ್ನು ಪ್ರಚಾರ ಮಾಡಿ, ಬಳಸುವುದರಿಂದ ದೇಶದ ಏಳಿಗೆ ಸಾಧ್ಯ ಎಂದ ಅವರು ಸ್ಥಳೀಯ ತಂತ್ರಜ್ಞಾನದ ಅವಶ್ಯಕತೆ ಹಾಗೂ ಸಿ.ವಿ ರಾಮನ್ ರವರ ಬದುಕು, ಅವರ ಆವಿಗಣ್ಕರಗಳು, ರಾಮನ್ ಪರಿಣಾಮ, ಬಣ್ಣಗಳ ಚದುರುವಿಕೆಯನ್ನು ಹೇಗೆ ದಿನನಿತ್ಯದ ಬದುಕಿನಲ್ಲಿ ಕಾಣಬಹುದಾಗಿದೆ ಎಂಬ ಬಗ್ಗೆ ಹಾಗೂ ಆಧುನಿಕ ತಂತ್ರಜ್ಞಾನಗಳು ಹೇಗೆ ಮನುಷ್ಯನನ್ನು ಏಕಾಂಗಿಯಾಗಿ ಮಾಡಿವೆ ಎಂದು ವಿಜ್ಞಾನದ ಮತ್ತೊಂದು ಮಗ್ಗುಲನ್ನು ವಿವರಿಸಿದರು ಹಾಗೂ ವಿಧ್ಯಾರ್ಥಿನಿಯರೊಂದಿಗೆ ಸಂವಾದ ನೆಡೆಸಿದರು.

ಕಸ್ತೂರಿ ಬಾ ಬಾಲಕಿಯರ ಪ್ರೌಢಶಾಲೆ ಮುಖ್ಯೋಪಾಧ್ಯಾಯರಾದ ಸಿ.ತಿಪ್ಪೇಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಎನ್ಆರ್ಡಿಎಂಎಸ್ ಅಧಿಕಾರಿ ಶಂಕರ್, ಜಿ.ಪಂ ನ ಅಂದಾಜು ಮೌಲ್ಯಮಾಪನಾಧಿಕಾರಿ, ಶಾಲೆಯ ಎಲ್ಲಾ ಶಿಕ್ಷಕರು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು, ಸಂಪನ್ಮೂಲ ವ್ಯಕ್ತಿಗಳು ವಿಜ್ಞಾನದ ಶಾಲಾ ಪಠ್ಯಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಇದೇ ವೇಳೆ ಸರ್ಕಾರದ ಅಧಿಸೂಚನೆಯ ಮೇರೆಗೆ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕ ವೃಂದದವರು, ವಿದ್ಯಾರ್ಥಿಗಳು ಸೇರಿದಂತೆ 700 ಕ್ಕೂ ಹೆಚ್ಚು ಮಕ್ಕಳು ಸಕ್ರಿಯವಾಗಿ ಭಾಗವಹಿಸಿದ್ದರು. ಹಾಗೂ ವಿದ್ಯಾರ್ಥಿಗಳಿಗೆ ಸ್ಥಳದಲ್ಲಿಯೇ ಚಿತ್ರ ಬರೆಯುವ ಸ್ಪರ್ಧೆ ಆಯೋಜಿಸಲಾಗಿದ್ದು, ಸ್ಪರ್ಧೆಯಲ್ಲಿ ವಿಜೇತರಾದವರಿಗೆ ನಗದು ಬಹುಮಾನ ನೀಡಲಾಯಿತು.

# ವಿಕಲ ಚೇತನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ನೀಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಂಗಳೂರು: ವಿಕಲ ಚೇತನರ ಬಹುದಿನಗಳ ಪ್ರಮುಖ ಬೇಡಿಕೆಗಳಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸ್ಥಳದಲ್ಲೇ ಆದೇಶ ಹೊರಡಿಸುವ ಮೂಲಕ ಸಮಸ್ಯೆಗಳಿಗೆ ಪರಿಹಾರ ನೀಡಿದ್ದಾರೆ.



ಫ್ರೀಡಂ ಪಾರ್ಕ್‌ನಲ್ಲಿ ವಿಕಲ ಚೇತನರು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಡೆಸಿದ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಭೇಟಿ ನೀಡಿದ ಸಚಿವರು, ಪ್ರಮುಖ ಎರಡು ಬೇಡಿಕೆಗಳಿಗೆ ಸ್ಥಳದಲ್ಲೇ ಪರಿಹಾರ ಆದೇಶ ಹೊರಡಿಸಿದ್ದಾರೆ.

**ಸ್ಥಳದಲ್ಲೇ ಆದೇಶ ನೀಡಿದ ಸಚಿವರು:**

ಆದೇಶ: 1: ಮಹಿಳಾ ಪುನರ್ವಸತಿ ಕಾರ್ಯಕರ್ತೆಯರಿಗೆ ವೇತನ ಸಹಿತ ಹೆರಿಗೆ ರಜೆ, ಆರು ತಿಂಗಳು, ಗರ್ಭಪಾತ ರಜೆ 45 ದಿನ.

ಆದೇಶ: 2: ಹೊಸದಾಗಿ ರಚನೆಗೊಂಡಿರುವ 51 ತಾಲೂಕುಗಳಿಗೆ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರು (ಎಂಆರ್ ಡಬ್ಲ್ಯೂ) ನೇಮಕಾತಿ ಮಾಡಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಆರ್ಥಿಕ ಇಲಾಖೆಗೆ ಶಿಫಾರಸು.

**ಮುಂದಿನ ವಾರ ಸಿಎಂ ಜೊತೆ ಚರ್ಚೆ:** ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ವಿಕಲ ಚೇತನರ ಸಮಸ್ಯೆಗಳಿಗೆ ಸರ್ಕಾರ ಶೀಘ್ರವೇ ಪರಿಹಾರ ನೀಡಲಿದೆ. ಈ ಸಂಬಂಧ ಮಾರ್ಚ್ 13 ಅಥವಾ 14 ರಂದು ಸಿಎಂ ಭೇಟಿ ಮಾಡಿ ಮನವಿ ಸಲ್ಲಿಸಲಾಗುವುದು ಎಂದು ಹೇಳಿದರು. ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ವಿಕಲ ಚೇತನರ ಉಳಿದ ಬೇಡಿಕೆಗಳನ್ನೂ ಈಡೇರಿಸಲಾಗುವುದು ಎಂದು ಸಚಿವರು ಹೇಳಿದರು.

**ಧರಣಿ ವಾಪಸ್ ಪಡೆದ ಪ್ರತಿಭಟನಾಕಾರರು:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭರವಸೆ ನೀಡಿದ ಹಿನ್ನೆಲೆಯಲ್ಲಿ ಅಹೋರಾತ್ರಿ ಪ್ರತಿಭಟನೆ ನಡೆಸಲು ಮುಂದಾಗಿದ್ದ ಪ್ರತಿಭಟನಾಕಾರರು ತಮ್ಮ ಪ್ರತಿಭಟನೆಯನ್ನು ಹಿಂತೆಗೆದುಕೊಂಡರು.

# ಕರುಣಾ ಸಾಗರದಂತಿರುವ ನನ್ನ ಗುರುದೇವರು

ಇಂದಿನ ದಿನಮಾನಗಳಲ್ಲಿ ಕಾವಿಧಾರಿಗಳಿಗೇನು ಕೊರತೆ ಇಲ್ಲ , ಆದರೆ ಪ್ರೀತಿಯ ಕರುಣೆಯಿಂದ ಬಿದ್ದ ಜೀವಗಳನ್ನು ಮೇಲೆತ್ತುವ ಸಂತರ ಸಂಖ್ಯೆ ಅತಿವಿರಳ. ರಾಜಕಾರಣಿಗಳ ಹಿಂದೆ ಜೈಕಾರ ಕೂಗುತ್ತಾ ಭಕ್ತರ ಮನೆಯ ಬಾಗಿಲನ್ನೇ ಮರೆತು ಬಿಟ್ಟು ತಮ್ಮ ಜೊತೆಗೆ ನಾಲ್ಕಾರು ಜನರನ್ನು ಇಟ್ಟುಕೊಂಡು ತಮ್ಮದೇ ಪ್ರಚಾರ ಪ್ರಸಾರ ಮಾಡಿಸಿಕೊಳ್ಳುತ್ತಿರುವ ಮಹಾನುಬಾವರಿಗಿಂತ ತದ್ವಿರುದ್ಧವಾಗಿ ಕಾಣಿಸುತ್ತಾರೆ ನನ್ನ ಗುರುದೇವರು. ಶಿವಾವತಾರಿ ಸಿದ್ಧಾರೂಡರ ಆರೋಡ ತತ್ವವನ್ನು ಹಳ್ಳಿ ಹಳ್ಳಿಗಳಿಗೂ ಬಿತ್ತಿ ಬೆಳೆದವರು ಆರೋಡ ಜ್ಯೋತಿ ಶಿವಪುತ್ರ ಅಜ್ಜನವರು. ಅವರಿಂದ ನಿರ್ಮಾಣವಾದ ಶಾಂತಾಶ್ರಮದ ಇಂದಿನ ಪೀಠಾಧಿಪತಿಗಳೇ ನನ್ನ ಗುರುದೇವ ಸದ್ಗುರು ಅಭಿನವ ಸಿದ್ದಾರೂಢ ಸ್ವಾಮೀಜಿಗಳು ಶಾಂತಾಶ್ರಮ ಎಂಬುದು ಆರೋಡ ಪರಂಪರೆಯ ಬಹುಪಾಲು ಜನರ ಗುರುಪೀಠ ಅಂತಹ ಗುರುಪೀಠಕ್ಕೆ ಶ್ರೀ ಗುರು ಅಭಿನವ ಶಿವಪುತ್ರ ಸ್ವಾಮೀಜಿಗಳು ಸಮರ್ಥ ಶಿಷ್ಯರನ್ನೇ ಹುಡುಕಿ ಈ ಸಮಾಜಕ್ಕೆ ಅರ್ಪಿಸಿದರು. ಮೂಲ ಗುರುಪೀಠದ ಪೀಠಾಧಿಪತಿಗಳಾಗಿ ಸರ್ವರ ಮೇಲು ಪ್ರೀತಿಯ ಕರುಣೆತೋರಿಸುತ್ತಾ, ಶಾಸ್ತ್ರದ ಸುಗಂಧವನ್ನು ನಾಡಿನಲ್ಲೆಡೆ ಬೀರುತ್ತಾ ದಾರಿತಪ್ಪುತ್ತಿರುವ ಸಮಾಜವನ್ನು ಭಕ್ತಿಭಾವದೆಡೆಗೆ ಕೊಂಡೊಯ್ಯುತ್ತಿರುವ ಯುವಯೋಗಿಗಳು ನನ್ನ ಗುರುದೇವರು.



ತಮ್ಮ ಪ್ರತಿ ಉಸಿರಿನಲ್ಲೂ ಮಾಡುವ ಪ್ರತಿ ಕೆಲಸದಲ್ಲೂ ತಮ್ಮ ಗುರುಗಳನ್ನೇ ಮೊದಲು ಮಾಡಿಕೊಂಡು ಎಲ್ಲಾ ಯಶಸ್ಸು ಗುರುವಿಂದಲೇ ಎಂದು ಹೇಳುವ ಈ ನಾಡಿನ ಕೆಲವೇ ಕೆಲವು ಸನ್ಯಾಸಿಗಳಲ್ಲಿ ನನ್ನ ಗುರುದೇವರು ಅಗ್ರಗಣ್ಯರ ಸಾಲಿಗೆ ಸೇರುತ್ತಾರೆ. ಇಲ್ಲಿ ಅಭಿನವ ಶಿವಪುತ್ರ ಸ್ವಾಮೀಜಿಗಳನ್ನು ನೆನೆಯುವುದು ಅತ್ಯವಶ್ಯಕ ಏಕೆಂದರೆ ಅನೇಕರ ವಿರೋಧದ ಮಧ್ಯೆಯೂ ತಮ್ಮ ಪೀಠಕ್ಕೆ ಅಳಿದುತೂಗಿ ಎಲ್ಲ ವಿರೋಧವನ್ನು ಮೆಟ್ಟಿನಿಂತು ಭಕ್ತರುದ್ಧಾರದ ಜೊತೆಗೆ ಅವರ ಕಣ್ಣೀರು ವರಿಸುವ ಜ್ಞಾನ ಪರ್ವತವನ್ನೇ ಹುಡುಕಿ ನಮ್ಮೆಲ್ಲರ ಪಾಲಿಗೂ ಕರುಣಿಸಿದರು.

ಆ ಸಮರ್ಥ ಯೋಗಿಯ ಜ್ಞಾನದ ಎದುರು ತಮ್ಮ ಪ್ರಭಾವ ಕಡಿಮೆಯಾಗಬಹುದೆಂದೆನಿಸಿದ ಕೆಲವರಿಗೆ ಅಭಿನವ ಶಿವಪುತ್ರ ಸ್ವಾಮೀಜಿಗಳ ನಿರ್ಧಾರ ನೋವನ್ನುಂಟು ಮಾಡಿತೊ ಏನು! ಆದರೆ ಭಕ್ತರ ಜ್ಞಾನದಾಹ ಇಂಗಿಸುವ ಶುದ್ಧ ಸಿಹಿತೀರ್ಥವಂತು ದೊರೆಯಿತು. ಹಿಂದಿನ ಶ್ರೀಗಳು ಭಕ್ತರ ಮೇಲಿಟ್ಟಿದ್ದ ಪ್ರೀತಿ ಕಾಳಜಿಯನ್ನು ಕಿಂಚಿತ್ತು ಕಡಿಮೆಯಾಗದಂತೆ ನೋಡಿಕೊಂಡು ಗುರುಗಳ ಕನಸುಗಳನ್ನೆಲ್ಲ ಸಾಕಾರಗೊಳಿಸಿ ಪ್ರಚಾರ ಪ್ರತಿಷ್ಠೆ ಬಯಸದೇ ನನ್ನಂತ ಅನೇಕ ಬೆಳೆಯುವ ಶಿಶುಗಳಿಗೆ ತಾಯಿಯಾಗಿ ರಕ್ಷಿಸುತ್ತಿರುವ ಪ್ರೀತಿಯ ಕರುಣಮೂರ್ತಿ ಮಾತೃ ಹೃದಯದ ಮಹಾಂತರು ಪೂಜ್ಯ ಗುರುದೇವರು. ಅವರ ನುಡಿಗಳನ್ನ ಕೇಳುತ್ತಿದ್ದರೆ ನಮ್ಮನ್ನೇ ನಾವು ಮರೆತು ಆಧ್ಯಾತ್ಮ ಲೋಕದ ಸಾಗರದಲ್ಲಿ ತೇಲುತ್ತೇವೆ.ಕಠಿಣ ವಿಷಯಗಳನ್ನು ಚಿಕ್ಕಮಕ್ಕಳಿಂದ ವಯೋವೃದ್ಧರವರೆಗೂ ಸರಳವಾಗಿ ಅಣುಭವಕ್ಕೆ ಬರುವಂತೆ ಜೊತೆಗೆ ಮಾತನಾಡುವವರನ್ನು ಮೌನಗೊಳಿಸುವಂತೆ ಇರುತ್ತವೆ ಗುರುದೇವರ ಪ್ರವಚನ.

–ಶ್ರೀ ರಾಮಕೃಷ್ಣ ದೇವರು
ಶ್ರೀ ಷಣ್ಮುಖಾರೂಢ ಮಠ.ವಿಜಯಪುರ


**ಕರ್ನಾಟಕ ಸರಕಾರ**
**ಪಟ್ಟಣ ಪಂಚಾಯತ ಕಾರ್ಯಾಲಯ, ಯರಗಟ್ಟಿ–591129**
**ತಾ : ಸವದತ್ತಿ, ಜಿ : ಬೆಳಗಾವಿ**
E-mail ltstaff_ulb_yaragatti@yahoo.com

ಕ್ರ.ಸಂ.ಪ.ಪಂ.ಯ:ಲೋಕೊ:15ನೇ ಹಣಕಾಸು, ಎಸ್.ಎಫ್.ಸಿ/2023–24 ದಿನಾಂಕ:28/02/2024

**ಟೆಂಡರ್ ಪ್ರಕಟಣೆ:**
**॥ಇ–ಪ್ರೋಕ್ಯೂರಮೆಂಟ್ ಮುಖಾಂತರ॥**

ಸನ್ 2023–24ನೇ ಸಾಲಿನ 15 ನೇ ಹಣಕಾಸು, ಎಸ್.ಎಫ್.ಸಿ ಯೋಜನೆಯ ಅನುದಾನದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದೇಶ 1999–2000ರ ಪ್ರಕಾರ ಆಕ್ಟ್ 2000ರ ನಿಯಮದಂತೆ ಸ್ಟ್ಯಾಂಡರ್ಡ ಬಿಡ್ ಡಾಕ್ಯುಮೆಂಟ್ ಕೆಜಿ–1 & ಕೆಜಿ–2 ನಿಯಮದನ್ವಯ ಟೆಂಡರಗಳನ್ನು ಆಹ್ವಾನಿಸಲಾಗಿದೆ. ಕಾರಣ ಇಚ್ಛೆಯುಳ್ಳ ಗುತ್ತಿಗೆದಾರರು/ಪೂರೈಕೆದಾರರು ಇ–ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ ಟೆಂಡರ ಸಲ್ಲಿಸಬಹುದು.

ಪ್ಯಾ. ಕ್ರ.ಸಂ:1:ಕಾಮಗಾರಿಗಳ ವಿವರ / ಇಂಡೆಂಟ್ ಸಂಖ್ಯೆ:DMA/2023-24/IND1635, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):9.70,ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):24,250/–,ಪ್ಯಾ. ಕ್ರ.ಸಂ:2:ಕಾಮಗಾರಿಗಳ ವಿವರ / ಇಂಡೆಂಟ್ ಸಂಖ್ಯೆ:DMA/2023-24/IND1638, ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ):2.50,ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):6,250/–

ಟೆಂಡರ್ ಸಲ್ಲಿಸುವ ಮೊದಲು ಗುತ್ತಿಗೆದಾರರು ಅತ್ಯಂತ ಅವಶ್ಯಕವಾಗಿ ಟೆಂಡರುಗಳಿಗೆ ಸಂಬಂಧಿಸಿದಂತೆ ನಿಯಮ ನಿಭಂದಣೆಗಳನ್ನು ಓದಿ ಪಾಲಿಸಬೇಕು.

ಟೆಂಡರ ಫಾರ್ಮ ವೆಬ್ ಸೈಟನಿಂದ ಡೌನ್ ಲೋಡ ಮಾಡಿಕೊಳ್ಳುವ ಪ್ರಾರಂಭದ ದಿನಾಂಕ: 28–02–2024, ಭರ್ತಿ ಮಾಡಿದ ಟೆಂಡರಗಳನ್ನು ಅಪಲೋಡ್ (Upload) ಮಾಡುವ ಕೊನೆಯ ದಿನಾಂಕ:07–03–2024 ಸಾಯಂಕಾಲ:4:00 ಘಂಟೆಯವರೆಗೆ, ಟೆಂಡರಗಳನ್ನು ತೆರೆಯುವ ದಿನಾಂಕ:08–03–2023 ರ ಸಾಯಂಕಾಲ 4:00 ಘಂಟೆಯ ನಂತರ ತೆರೆಯಲಾಗುವುದು,ಹೆಚ್ಚಿನ ಮಾಹಿತಿ ಮತ್ತು ಶರತ್ತುಗಳಿಗಾಗಿ Website: https://kppp.karnataka.gov.in ವೆಬ್‌ಸೈಟನಲ್ಲಿ ನೋಡಬಹುದು.

ಸಹಿ/–ಮುಖ್ಯಾಧಿಕಾರಿಗಳು
ಪಟ್ಟಣ ಪಂಚಾಯತ ಯರಗಟ್ಟಿ

ಸಹಿ/–ಆಡಳಿತಾಧಿಕಾರಿಗಳು
ಪಟ್ಟಣ ಪಂಚಾಯತ ಯರಗಟ್ಟಿ
ಹಾಗೂ ತಹಶೀಲ್ದಾರರು ಯರಗಟ್ಟಿ


DIPR/BGM/RO-NO-1269/KSMCA/2023-24

### ಬಳ್ಳಾರಿ ಮಹಾನಗರ ಪಾಲಿಕೆ ಸಾಮಾನ್ಯ ಸಭೆ

# ನಗರ ಸ್ವಚ್ಛತೆಗೆ ವಿಶೇಷ ಕ್ರಮ; ಸಿಸಿ ಟಿವಿ ಅಳವಡಿಕೆಗೆ ಕ್ರಮ

ಬಳ್ಳಾರಿ: ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಾರ್ಡ್ಗಳಲ್ಲಿ ಸ್ವಚ್ಛತೆಯ ದೃಷ್ಟಿಯಿಂದ ಮತ್ತು ನಗರದಲ್ಲಿ ಎಲ್ಲಿ ಬೇಕೆಂದರಲ್ಲಿ ಕಸ ಹಾಕುವುದನ್ನು ಕಡಿವಾಣ ಹಾಕಲು ಪ್ರತಿ ವಾರ್ಡ್ಗಳಲ್ಲಿ ಸಿಸಿಟಿವಿ ಅಳವಡಿಕೆಗೆ ಕ್ರಮ ವಹಿಸಲಾಗುವುದು ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಹೇಳಿದರು.

ಮಹಾನಗರ ಪಾಲಿಕೆಯ ಮೇಯರ್ ಬಿ.ಶ್ವೇತ ಅವರ ಅಧ್ಯಕ್ಷತೆಯಲ್ಲಿ ನಗರದ ಜಿಪಂನ ನಜೀರ್ಸಾಬ್ ಸಭಾಂಗಣದಲ್ಲಿ ಗುರುವಾರ ನಡೆದ ಬಳ್ಳಾರಿ ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಸದಸ್ಯರೆಲ್ಲರೂ ಇದಕ್ಕೆ ಸಹಮತ ವ್ಯಕ್ತಪಡಿಸಿದರು.



ಸ್ವಚ್ಛ ಮತ್ತು ಸ್ವಾಸ್ಥ್ಯ ಬಳ್ಳಾರಿಯನ್ನಾಗಿ ನಿರ್ಮಾಣ ಮಾಡಲು, ಎಲ್ಲಾ ಸಾರ್ವಜನಿಕರ ಪಾತ್ರ ಪ್ರಮುಖವಾಗಿದ್ದು, ಸಾರ್ವಜನಿಕರಲ್ಲಿ ಸ್ವಚ್ಛತೆಯ ಬಗ್ಗೆ ಹೆಚ್ಚಿನ ಮಾಹಿತಿ ಮತ್ತು ಅರಿವು ಮೂಡಿಸುವ ಕೆಲಸವಾಗಬೇಕು ಎಂದು ಪಾಲಿಕೆಯ ಸದಸ್ಯರು ಒತ್ತಾಯಿಸಿದರು. ಇದಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಪ್ರತಿಕ್ರಿಯಿಸಿ, ಜನ ಜಾಗೃತಿಗೆ ಆಯಾ ವಾರ್ಡ್ಗಳ ಯುವಕರ ಸಂಘ ಸಂಸ್ಥೆಗಳ ಸಹಕಾರ ತೆಗೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ನಗರದಲ್ಲಿ ವಿವಿಧೆಡೆ ಬಿಡಾಡಿ ದನಗಳ ಹಾವಳಿ ತೀವ್ರವಾಗಿದ್ದು, ವಾಹನ ಸವಾರರಿಗೆ ಅಡ್ಡಿಯನ್ನುಂಟು ಮಾಡುತ್ತಿವೆ ಎಂದು ಸದಸ್ಯರು ಸಚಿವರ ಗಮನಕ್ಕೆ ತಂದರು. ಪ್ರತಿಕ್ರಿಯಿಸಿದ ಸಚಿವರು, ಬಿಡಾಡಿ ದನಗಳ ಮಾಲೀಕರು ತಮ್ಮ ಆವರಣದಲ್ಲಿಯೇ ಕಟ್ಟಿ ಹಾಕಿಕೊಳ್ಳಬೇಕು. ಇಲ್ಲದಿದ್ದರೆ ಅಧಿಕಾರಿಗಳು ಕೇಸ್ ದಾಖಲು ಮತ್ತು ದಂಡ ವಿಧಿಸುವ ಕು–ರಿತು ಎಚ್ಚರಿಕೆ ನೀಡಬೇಕು. ಮಾಲೀಕತ್ವ ಇಲ್ಲದವುಗಳನ್ನು ಕೂಡಲೇ ವಶಕ್ಕೆ ಪಡೆದು, ಗೋಶಾಲೆಗಳಿಗೆ ರವಾನಿಸುವ ಕ್ರಮ ವಹಿಸಬೇಕು ಎಂದು ಪಾಲಿಕೆಯ ಅಧಿಕಾರಿಗಳಿಗೆ ಸೂಚಿಸಿದರು.

ನಗರದಲ್ಲಿನ ಹಳೆಯ ತಹಶೀಲ್ದಾರರ ಕಚೇರಿ ಆವರಣವನ್ನು ಮುಂದಿನ ದಿನಗಳಲ್ಲಿ ಸುಮಾರು 30 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಿ ಪಾಲಿಕೆಯ ಸದಸ್ಯರ ಕೊಠಡಿ ನಿರ್ಮಾಣ ಮಾಡಿಕೊಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಅವರು ಪ್ರಸ್ತಾಪಿಸಿದರು. ಇದಕ್ಕೆ ಸದಸ್ಯರೆಲ್ಲರೂ ಸಮ್ಮತಿ ವ್ಯಕ್ತಪಡಿಸಿದರು.

ಪಾಲಿಕೆಯ ವಿವಿಧ ವಾರ್ಡ್ಗಳಲ್ಲಿ ರಾತ್ರಿ ಸಮಯದಲ್ಲಿ ಮನೆ ದರೋಡೆಯಂತಹ ಘಟನೆಗಳು ನಡೆಯುತ್ತಿದೆ ಎಂದು ಸದಸ್ಯರೊಬ್ಬರು ಸಭೆಯ ಗಮನಕ್ಕೆ ತಂದರು. ರಾತ್ರಿಯ ವೇಳೆಯಲ್ಲಿ ಪೊಲೀಸ್ ಸಿಬ್ಬಂದಿ ಹೆಚ್ಚೆಚ್ಚು ಗಸ್ತು ಬೀಟ್ ಹಾಕುವಂತೆ ಸೂಚಿಸಲಾಗುವುದು ಎಂದು ತಿಳಿಸಿದರು.

ನಗರದಲ್ಲಿ ಬೀದಿ ನಾಯಿಗಳಿಗೆ ಆಂಟಿರೇಬೀಸ್ ವ್ಯಾಕ್ಸಿನೇಷನ್ ಮತ್ತು ಸಂತಾನ ಹರಣ ಚಿಕಿತ್ಸೆಯ ಕಾರ್ಯವು ನಡೆಯುತ್ತಿದ್ದು, ಆ ಕಾರ್ಯಕ್ಕೆ ಬಾಕಿ ಉಳಿದ ಹಣವನ್ನು ಪಾಲಿಕೆಯ ಸಾಮಾನ್ಯ ನಿಧಿಯಡಿಯಲ್ಲಿ ಪಾವತಿ ಮಂಜೂರಾತಿಗೆ ಸದಸ್ಯರು ಅನುಮೋದನೆ ನೀಡಿದರು.

ಸಭೆಯಲ್ಲಿ ಇನ್ನಿತರೆ ವಿಷಯಗಳ ಕುರಿತು ಸುಧೀರ್ಘ ಕಾಲ ಚರ್ಚೆ ನಡೆಯಿತು.

ಈ ವೇಳೆ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಮಹಾನಗರ ಪಾಲಿಕೆ ಮೇಯರ್ ಬಿ.ಶ್ವೇತ, ಉಪಮೇಯರ್ ಬಿ.ಜಾನಕಿ, ತೆರಿಗೆ ನಿರ್ಧರಣೆ, ಹಣ–ಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿ ಅಧ್ಯಕ್ಷ ನೂರ್ ಮೊಹಮ್ಮದ್, ಸಾರ್ವಜನಿಕ ಆರೋಗ್ಯ, ಶಿಕ್ಷಣ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷ ಆಸೀಫ್ ಭಾಷಾ, ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿಯ ಅಧ್ಯಕ್ಷ ಹನುಮಂತಪ್ಪ. ಕೆ., ಪಾಲಿಕೆಯ ಆಯುಕ್ತ ಜಿ.ಖಲೀಲ್ ಸಾಬ್ ಸೇರಿದಂತೆ ಪಾಲಿಕೆಯ ಸದಸ್ಯರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರ ನೂತನ ಕಚೇರಿ ಉದ್ಘಾಟನೆ



ಬಳ್ಳಾರಿ: ಪರಿಶಿಷ್ಟ ಪಂಗಡಗಳ ಕಲ್ಯಾಣ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು, ಇಂದು ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ 'ಸಿ' ಬ್ಲಾಕ್ ನ ಮೊದಲ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 49 ರಲ್ಲಿನ ತಮ್ಮ ನೂತನ ಕಚೇರಿಯನ್ನು ಉದ್ಘಾಟಿಸಿದರು.


ಈ ಸಂದರ್ಭದಲ್ಲಿ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಮಹಾನಗರ ಪಾಲಿಕೆ ಮೇಯರ್ ಬಿ.ಶ್ವೇತ, ಉಪಮೇಯರ್ ಬಿ.ಜಾನಕಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಸಹಾಯಕ ಆಯುಕ್ತ ಹೇಮಂತ್.ಎನ್., ಡಿಎಂಎಫ್ ವಿಶೇಷಾಧಿಕಾರಿ ಪಿ.ಎಸ್.ಮಂಜುನಾಥ, ತಹಶೀಲ್ದಾರ ಗುರುರಾಜ ಸೇರಿದಂತೆ ಪಾಲಿಕೆಯ ಸದಸ್ಯರು, ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ನಟ, ರಾಜಕಾರಣಿ ಕೆ. ಶಿವರಾಮ್ ನಿಧನಕ್ಕೆ ಗಣ್ಯರ ಸಂತಾಪ

ಬೆಂಗಳೂರು: ಖ್ಯಾತ ನಟ, ಮಾಜಿ ಐಎಎಸ್ ಅಧಿಕಾರಿ, ರಾಜಕಾರಣಿ ಕೆ. ಶಿವರಾಮ್ ಅವರು ಗುರುವಾರ ನಿಧನ ಹೊಂದಿದ್ದಾರೆ.

ಅವರಿಗೆ 71 ವರ್ಷ ವಯಸ್ಸಾಗಿ–ತ್ತು. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಚಿತ್ರರಂಗದ ಗಣ್ಯರು ಹಾಗು ರಾಜ–ಕಾರಣಿಗಳು ಕೋರುತ್ತಿದ್ದಾರೆ. ನಿಧನ ಹೊಂದುವುದಕ್ಕೂ ಮೊದಲು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಸೇರಿದಂತೆ ಅನೇಕ ಗಣ್ಯರು ಆಸ್ಪತ್ರೆಗೆ ಭೇಟಿ ನೀಡಿ ಅವರ ಆರೋಗ್ಯ ವಿಚಾರಿಸಿದ್ದರು. ವೈದ್ಯರು ಎಷ್ಟೇ ಪ್ರಯತ್ನಿಸದರೂ ಶಿವರಾಮ್ ಅವರನ್ನು ಬದುಕಿಸಲು ಸಾಧ್ಯವಾಗಿಲ್ಲ.

ಶಿವರಾಮ್ ಅವರಿಗೆ 15 ದಿನಗಳ ಹಿಂದೆ ಅಧಿಕ ರಕ್ತದೊತ್ತಡದಿಂದ ಸಮಸ್ಯೆ ಆಗಿ–ತ್ತು. ಇತ್ತೀಚೆಗೆ ಹೃದಯಾಘಾತ ಆಯಿತು. ಹೀಗಾಗಿ, ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ಅವರನ್ನು ದಾಖಲಿಸಲಾಯಿತು. ಸಾವಿಗೂ ಮುನ್ನ ಅವರ ಮಿದುಳು ಕೂಡ ಕಾರ್ಯ ನಿರ್ವಹಿಸುವುದನ್ನು ನಿಲ್ಲಿಸಿಬಿಟ್ಟಿತ್ತು. ಅವರನ್ನು ಐಸಿಯುನಲ್ಲಿ ಇರಿಸಿ ಚಿಕಿತ್ಸೆ ನೀಡಲಾಯಿತು. ಈಗ ಅವರು ಮೃತಪಟ್ಟಿದ್ದಾರೆ ಎಂಬ ಸುದ್ದಿ ಹೊರಬಿದ್ದಿದೆ.



ಶಿವರಾಮ್ ಅವರು ಜನಿಸಿದ್ದು, 1953ರ ಏಪ್ರಿಲ್ 6ರಂದು. ರಾಮನಗರ ಅವರ ಹುಟ್ಟೂರು. ತಮ್ಮ ಗ್ರಾಮದಲ್ಲಿ ಪ್ರಾಥ–ಮಿಕ ಶಿಕ್ಷಣ ಪಡೆದ ಅವರು, ಪ್ರೌಢ ಶಿಕ್ಷಣ ಪಡೆಯಲು ಬೆಂಗಳೂರಿಗೆ ಬಂದರು. 1985ರಲ್ಲಿ ಅವರು ಕೆಎಎಸ್ ಪಾಸ್ ಮಾಡಿ, ಡಿಎಸ್ಪಿ ಆದರು. ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ತರಬೇತಿ ಪಡೆಯುವಾಗಲೇ ಯುಪಿಎಸ್ಸಿ ಪಾಸ್ ಮಾಡಿದರು. ಈ ಮೂಲಕ ಐಎಎಸ್ ಅಧಿಕಾರಿ ಆದ–ರು. ಕನ್ನಡ ಭಾಷೆಯಲ್ಲಿ ಐಎಎಸ್ ಪಾಸ್ ಮಾಡಿದ ಮೊದಲ ವ್ಯಕ್ತಿ ಎನ್ನುವ ಹೆಮ್ಮೆ ಶಿವರಾಮ್ಗೆ ಇದೆ. 1986ರಿಂದ 2013ರವರೆಗೆ ಅವರು ಐಎಎಸ್ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು.

ಈ ಮಧ್ಯೆ ಶಿವರಾಮ್ ಅವರಿಗೆ ಸಿನಿಮಾಸಕ್ತಿಯೂ ಬೆಳೆದಿತ್ತು. 1993ರ ಸೂಪರ್ ಹಿಟ್ ಸಿನಿಮಾ 'ಬಾ ನಲ್ಲೆ ಮಧುಚಂದ್ರಕೆ' ಚಿತ್ರದಲ್ಲಿ ನಟಿಸಿ ಗೆಲುವು ಕಂಡರು. ನಂತರ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. 2017ರಲ್ಲಿ ರಿಲೀಸ್ ಆದ 'ಟೈಗರ್' ಅವರ ನಟನೆಯ ಕೊನೆಯ ಸಿನಿಮಾ.

ರಾಜಕೀಯ ಬದುಕು 2013ರಲ್ಲಿ ಶಿವರಾಮ್ ಅವರು ಕಾಂಗ್ರೆಸ್ ಸೇರಿದರು. 2014ರಲ್ಲಿ ಜೆಡಿಎಸ್ ಸೇರಿದ ಅವರು, ಬಿಜಾಪುರ ಕ್ಷೇತ್ರದಿಂದ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದರು. ರಮೇಶ್ ಜಿಗಜಿಣಗಿ ವಿರುದ್ಧ ಸೋತರು. ಅದೇ ವರ್ಷ ಅವರು ಮರಳಿ ಕಾಂಗ್ರೆಸ್ಗೆ ಬಂದರು. ಅದೇ ವರ್ಷ ಅಕ್ಟೋಬರ್ ತಿಂಗಳಲ್ಲಿ ಬಿಜೆಪಿ ಸೇರಿದರು.

## ವಿಷ ಕುಡಿದ ವ್ಯಕ್ತಿಯನ್ನು ಹೆಗಲ ಮೇಲೆ ಹೊತ್ತು 2 ಕಿ.ಮೀ ಓಡಿ ಪ್ರಾಣ ಉಳಿಸಿದ ಕಾನ್ಸ್ಟೇಬಲ್

ಹೈದರಾಬಾದ್: ವ್ಯಕ್ತಿಯೊಬ್ಬ ಗದ್ದೆಯಲ್ಲಿ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದ. ಸಕಾಲಕ್ಕೆ ಬಂದ ಓರ್ವ ಕಾನ್ಸ್ಟೆಬಲ್, ವಿಷ ಕುಡಿದಿದ್ದ ವ್ಯಕ್ತಿಯನ್ನು 2 ಕಿಲೋ ಮೀಟ–ರ್‌ವರೆಗೆ ಹೊತ್ತುಕೊಂಡು ಹೋಗಿ ಆಸ್ಪತ್ರೆಗೆ ದಾಖಲಿಸುವ ಮೂಲಕ ಪ್ರಾಣ ಉಳಿಸಿದ್ದಾರೆ. ಈ ಘಟನೆ ತೆಲಂಗಾಣದ ಕರೀಮ್ನಗರ ಜಿಲ್ಲೆಯಲ್ಲಿ ನಡೆದಿದೆ.

ತೆಲಂಗಾಣ ರಾಜ್ಯದ ಕರೀಮ್ನಗರ ಜಿಲ್ಲೆಯ ವೀಣವಂಕ ಮಂಡಲದ ಭೇತಿಗಲ್‌ನಲ್ಲಿ ಕುರ್ರಾ ಸುರೇಶ್ ಎಂಬಾತ ತಮ್ಮ ಕುಟುಂಬದೊಂದಿಗೆ ವಾಸಿಸುತ್ತಿದ್ದಾರೆ.

ಸುರೇಶ್ ಬುಧವಾರ ಮನೆಯವರೊಂದಿಗೆ ಜಗಳವಾಡಿದ್ದ. ಬಳಿಕ ಸಮೀಪದ ಜಮೀನಿಗೆ ತೆರಳಿ ಕೀಟನಾಶಕ ಸೇವಿಸಿದ್ದ. ಸುರೇಶನ ಪಕ್ಕದ ಗದ್ದೆಯಲ್ಲಿದ್ದವರು ಕ್ರಿಮಿನಾಶಕ ಕುಡಿಯುತ್ತಿರುವುದನ್ನು ಗಮನಿಸಿ, ತಕ್ಷಣ 100ಕ್ಕೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ. ಮಾಹಿತಿ ಪಡೆದ ತಕ್ಷಣ ಕಾನ್ಸ್ಟೆಬಲ್ ಜಯಪಾಲ್ ಹಾಗೂ ಗೃಹ ರಕ್ಷಕ ದಳದ ಕಿನ್ನೇರ ಸಂಪತ್ ಘಟನಾ ಸ್ಥಳಕ್ಕೆ ಧಾವಿಸಿದರು. ಈ ವೇಳೆ ಸುರೇಶ್ ಪ್ರಜ್ಞಾಹೀನರಾಗಿದ್ದರು. ತಡಮಾಡಿದರೆ ಪ್ರಾಣಕ್ಕೆ ಅಪಾಯ ಬರುತ್ತದೆ ಎಂಬುದನ್ನು ಮನಗಂಡ ಕಾನ್ಸ್ಟೆಬಲ್ ಜಯಪಾಲ್, ಸಮಯ ಪ್ರಜ್ಞೆ ಮೆರೆದರು.



ಕಾನ್ಸ್ಟೆಬಲ್ ಜಯಪಾಲ್, ಸುರೇಶನನ್ನು ಭುಜದ ಮೇಲೆ ಹೊತ್ತುಕೊಂಡು ಹೊಲಗಳಲ್ಲಿ ಸುಮಾರು 2 ಕಿಲೋಮೀಟರ್ ಓಡಿದರು. ಗದ್ದೆಗಳ ಗದ್ದೆಗಳ ಮೇಲೆ ಓಡಿ ಗ್ರಾಮಕ್ಕೆ ಕರೆತರಲಾಯಿತು. ಬಳಿಕ ಕುಟುಂಬಸ್ಥರ ನೆರವಿನಿಂದ ಜಮ್ಮಿಕುಂಟಾ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದಿದ್ದಾರೆ.

ಸದ್ಯ ಸುರೇಶ್ ಅವರ ಆರೋಗ್ಯ ಸ್ಥಿರವಾಗಿದೆ ಎಂದು ಸಂತ್ರಸ್ತೆಯ ಕುಟುಂಬಸ್ಥರು ತಿಳಿಸಿದ್ದಾರೆ.

ಸಕಾಲದಲ್ಲಿ ಸುರೇಶ್ ಅವರನ್ನು ರಕ್ಷಿಸಿದ ಜಯಪಾಲ್ ಅವರನ್ನು ಗ್ರಾಮಸ್ಥರು ಶ್ಲಾಘಿಸಿದರು.

ತಮ್ಮ ಮಗನನ್ನ ರಕ್ಷಿಸಲು ಪೊಲೀಸ್ ರೂಪದಲ್ಲಿ ದೇವರಂತೆ ಬಂದಿದ್ದಕ್ಕೆ ಸುರೇಶ್ ಕುಟುಂಬಸ್ಥರು ಧನ್ಯವಾದ ಅರ್ಪಿಸಿದರು. ಸುರೇಶ್ ಅವರ ಜೀವ ಉಳಿಸಿದ ಜಯಪಾಲ್ ಹಾಗೂ ಇತರೆ ಸಿಬ್ಬಂದಿಯನ್ನು ಉನ್ನತ ಪೊಲೀಸ್ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಅಭಿನಂದಿಸಿದ್ದಾರೆ.

## ಲೈಂಗಿಕ ದೌರ್ಜನ್ಯ: ತಲೆಮರೆಸಿಕೊಂಡಿದ್ದ ಟಿಎಂಸಿ ನಾಯಕ ಅರೆಸ್ಟ್




ಕೋಲ್ಕತ್ತಾ: ಸಂದೇಶ್‌ಖಾಲಿ ಪ್ರಕರಣದ ಪ್ರಮುಖ ಆರೋಪಿ, ತೃಣಮೂಲ ಕಾಂಗ್ರೆಸ್ ಮುಖಂಡ ಶೇಖ್ ಷಹಜಹಾನ್‌ನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಷಹಜಹಾನ್ ಮತ್ತು ಆತನ ಸಹಚರರು ಸಂದೇಶ್‌ಖಾಲಿಯಲ್ಲಿ ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಮತ್ತು ಭೂಕಬಳಿಕೆ ಆರೋಪ ಹೊತ್ತಿದ್ದಾರೆ. ಹೀಗಾಗಿ, ಉತ್ತರ 24 ಪರಗಣ ಜಿಲ್ಲೆಯಲ್ಲಿ ಶೇಖ್ ಷಹಜಹಾನ್‌ನನ್ನು ಬಂಗಾಳದ ವಿಶೇಷ ಪೊಲೀಸ್ ತಂಡವು ಮಧ್ಯರಾತ್ರಿ ಬಂಧಿಸಿದೆ. ಈತ 55 ದಿನಗಳಿಂದ ಪರಾರಿಯಾಗಿದ್ದ. ಬಂಧನದ ನಂತರ ಆತನನ್ನು ಬಸಿರ್ಹತ್ ನ್ಯಾಯಾಲಯಕ್ಕೆ ಕರೆದೊಯ್ಯಲಾಯಿತು. ಬಂಧನಕ್ಕೆ ಮುನ್ನ ಹಲವು ದಿನಗಳಿಂದ ಆತನ ಚಟುವಟಿಕೆಗಳ ಮೇಲೆ ತಂಡ ನಿಗಾ ಇರಿಸಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಂದೇಶ್‌ಖಾಲಿ ಪ್ರಕರಣದಲ್ಲಿ ಟಿಎಂಸಿ ನಾಯಕ ಹೆಸರನ್ನೂ ಸೇರಿಸುವಂತೆ ಕೋಲ್ಕತ್ತಾ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳು ಆದೇಶಿಸಿದ ಮೂರು ದಿನಗಳ ನಂತರ ಆತನನ್ನು ಪೊಲೀಸರು ಬಂಧಿಸಿದ್ದಾರೆ. ಪ್ರಕರಣದಲ್ಲಿ ಆತನಿಗೆ ನೋಟಿಸ್ ನೀಡಬೇಕು. ಬಂಧನ ವಿಚಾರವಾಗಿ ಯಾವುದೇ ಕಾರಣ ನೀಡುವಂತಿಲ್ಲ ಎಂದು ಪೊಲೀಸರಿಗೆ ಕೋರ್ಟ್ ಸೂಚನೆ ನೀಡಿತ್ತು.

## ಕಾಗವಾಡದಲ್ಲಿ ಜ್ಯೋತಿ ರಥಯಾತ್ರೆ ಅದ್ದೂರಿ ಸ್ವಾಗತ

ಬೆಳಗಾವಿ: ಕರ್ನಾಟಕ ಸಂಭ್ರಮ 50ರ ಅಂಗವಾಗಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಜ್ಯೋತಿ ರಥ ಯಾತ್ರೆಯು ಗುರುವಾರ (ಫೆ.29) ರಂದು ಬೆಳಗಾವಿ ಜಿಲ್ಲೆಯ ಕಾಗವಾಡ ತಾಲೂಕಿನಲ್ಲಿ ಕರ್ನಾಟಕ ಸುವರ್ಣ ಸಂಭ್ರಮ ಜ್ಯೋತಿರಥ–ಯಾತ್ರೆಕ್ಕೆ ಎಮ್ ಆರ್ ಮುಂಜೆ ಅವರು ಪೂಜೆ ನೆರವೇರಿಸಿ, ಅದ್ದೂ–ರಿಯಾಗಿ ಸ್ವಾಗತಿಸಿದರು.

ಈ ವೇಳೆ ತಹಸೀಲ್ದಾರ್ ಎಸ್. ಬಿ. ಇಂಗಳೆ, ಉಪ ತಹಸೀಲ್ದಾರ್ ಎ.ಎಸ್ ಕೋರೆ, ಕ್ಷೇತ್ರ ಶಿಕ್ಷಣಾಧೀಕಾರಿಗಳಾದ ಟಿ.ಎಸ್ ಪಟೇಲ್, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ (CRP) ಕಾಗವಾಡ



ಸಂಜುಕುಮಾರ್ ಸದಲಗೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿ (CDPO) ಎಮ್.ಆರ್ ಪಾಟೀಲ, ಎಮ್.ಎಸ್. ಗೋನಾಳ, ಪಟ್ಟಣ ಪಂಚಾಯತ್ ಮುಖ್ಯಧಿಕಾರಿ ಕೆ. ಕೆ. ಗಾವಡೆ, ಕಂದಾಯ ನಿರೀಕ್ಷಕ ಎಸ್.ಬಿ ಮುಲ್ಲಾ, ಶಿವಗೌಡ ಕಾಗೆ ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಮೆರವಣಿಗೆ ತಂಡಗಳು, ಕನ್ನಡ ಪರ ಸಂಘಟನೆ ಪದಾಧಿಕಾರಿಗಳು, ಶಾಲಾ–ಕಾಲೇಜ ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು ಭಾಗವಹಿಸಿದ್ದರು.

## ಲೋಕಾಯುಕ್ತ ಕುಂದು ಕೊರತೆ ಸಭೆಯ ಉಪಯೋಗ ಪಡೆಯಿರಿ : ಸುರೇಶ್ ಹೆಚ್.ಎಸ್

ಶಿವಮೊಗ್ಗ: ಸಾರ್ವಜನಿಕರಿಂದ ಸ್ವೀಕ–ರಿಸಲಾದ ಅಹವಾಲು ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗಳು ನಿಗದಿತ ಅವಧಿಯೊಳಗೆ ವಿಲೇವಾರಿ ಮಾಡಬೇಕು. ಹಾಗೂ ಸಾರ್ವಜನಿಕರು ಸಹ ತಮ್ಮ ಸಮಸ್ಯೆಗಳ ಕುರಿತು ಅರ್ಜಿಗಳನ್ನು ನೀಡಲು ಮುಂದೆ ಬರಬೇಕು ಎಂದು ಕರ್ನಾಟಕ ಲೋಕಾಯುಕ್ತ ಸಬ್ ಇನ್ಸ್ಪೆಕ್ಟರ್ ಸುರೇಶ್ ಹೆಚ್ ಎಸ್ ತಿಳಿಸಿದರು.

ತಾಲ್ಲೂಕು ಪಂಚಯ್ತಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಸಾರ್ವಜನಿಕರ ಕುಂದು ಕೊರತೆ ಅಹವಾಲು ಸ್ವೀಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಸಾರ್ವಜನಿಕರಿಂದ ಅರ್ಜಿ ಸ್ವೀಕರಿಸಿದರು.



ಸರ್ಕಾರಿ ಕರ್ತವ್ಯ ನಿರ್ವಹಿಸಲು ಬೇಜವಾಬ್ದಾರಿತನ, ನಿರ್ಲಕ್ಷ್ಯ, ಅನಗತ್ಯ ವಿಳಂಬ ಮತ್ತು ಅಧಿಕೃತ ಕೆಲಸಕ್ಕಾಗಿ ಲಂಚಕ್ಕೆ ಬೇಡಿಕೆ ಇಟ್ಟಂತಹ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಸಾರ್ವಜನಿಕರು ಲಿಖಿತವಾಗಿ ಶಿವಮೊಗ್ಗದ ಕರ್ನಾಟಕ ಲೋಕಾಯುಕ್ತಕ್ಕೆ ಅಹವಾಲು ಸಲ್ಲಿಸಬಹುದು. ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಿ ಸಂಬಂಧಿಸಿದ ಇಲಾಖೆಗಳಿಗೆ ಕಳುಹಿಸಿ ಸಮಸ್ಯೆಗಳಿಗೆ ಪರಿಹಾರ ಸೂಚಿಸಲಾಗುವುದು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳನ್ನು ನೀಡಿ ಕುಂದು ಕೊರತೆ ಸಭೆಗಳ ಉಪಯೋಗ ಪಡೆಯಬೇಕೆಂದರು.

ಶಿವಮೊಗ್ಗ ತಹಶೀಲ್ದಾರ್ ಗಿರೀಶ್ ಮಾತನಾಡಿ, ಸರ್ಕಾರಿ ಅಧಿಕಾ–ರಿ/ನೌಕರರು ತಮ್ಮ ತಮ್ಮ ಕೆಲಸ ಕಾರ್ಯಗಳನ್ನು ಸಮರ್ಪಕವಾಗಿ ಅರ್ಥ ಮಾಡಿಕೊಂಡು ನಿಗದಿತ ಅವಧಿಯೊಳಗೆ ಕರ್ತವ್ಯ ನಿರ್ವಹಿಸಿದಲ್ಲಿ ಸಮಸ್ಯೆಗಳು ಅಷ್ಟಾಗಿ ಉದ್ಭವಿಸುವುದಿಲ್ಲ. ಯಾ–ರಿಗೂ ಹೆದರಿ ಕೆಲಸ ಮಾಡುವ ಅವಶ್ಯಕತೆ ಇಲ್ಲ. ಯಾವುದೇ ಹಣ, ಆಮಿಷಗಳಿಗೆ ಒಳಗಾಗದೇ ನಮ್ಮ ಕೆಲಸವನ್ನು ನಿಯಮಾನುಸಾರ ಸಕಾಲದಲ್ಲಿ ನಿರ್ವಹಿಸಿದರೆ ಸಾಕು. ಸರ್ಕಾರಿ ಕೆಲಸ ಪುಣ್ಯದ ಕೆಲಸವಾಗಿದ್ದು, ಪ್ರಾಮಾಣಿಕವಾಗಿ ಮಾಡೋಣ ಎಂದರು.

ಸಭೆಯಲ್ಲಿ ಕಳೆದ ಮಾಹೆಯಲ್ಲಿ ಸ್ವೀಕ–ರಿಸಲಾದ 7 ಅರ್ಜಿಗಳ ಪೈಕಿ 6 ನ್ನು ವಿಲೇವಾರಿ ಮಾಡಲಾಯಿತು. ಇಂದಿನ ಸಭೆಯಲ್ಲಿ ಮಹಾನಗರ ಪಾಲಿಕೆ, ಕಂದಾಯ ಇಲಾಖೆ, ನೀರಾವರಿ ಇಲಾಖೆಗಳಿಗೆ ಸಂಬಂಧಿಸಿದ 6 ಅಹವಾಲುಗಳನ್ನು ಸ್ವೀಕರಿಸಲಾಯಿತು.

ಸಭೆಯಲ್ಲಿ ಶಿವಮೊಗ್ಗ ತಾಲ್ಲೂಕು ಇಓ ಅವಿನಾಶ್, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು.

## ಇಂದು ಧಾರವಾಡದ ಐಐಟಿಯ ಜ್ಞಾನ ಸಂಪನ್ಮೂಲ ಮತ್ತು ದತ್ತಾಂಶ ಕೇಂದ್ರ ಹಾಗೂ ಸೆಂಟ್ರಲ್ ಲರ್ನಿಂಗ್ ಥಿಯೇಟರ್ ಉದ್ಘಾಟನೆ

ಧಾರವಾಡ: ಭಾರತದ ಗೌರವಾನ್ವಿತ ಉಪ ರಾಷ್ಟ್ರಪತಿಗಳಾದ ಶ್ರೀ ಜಗದೀಪ್ ಧನ್ಕರ್ ಅವರು ನಾಳೆ ಮಾರ್ಚ್ 1, 2024 ರ, ಶುಕ್ರವಾರದಂದು ಮಧ್ಯಾಹ್ನ 2 ಗಂಟೆಗೆ ಧಾರವಾಡ ಐಐಟಿಯಲ್ಲಿನ ಜ್ಞಾನ ಸಂಪನ್ಮೂಲ ಮತ್ತು ದತ್ತಾಂಶ ಕೇಂದ್ರ (ಕೆಆರ್ಡಿಸಿ) ಹಾಗೂ ಸೆಂಟ್ರಲ್ ಲರ್ನಿಂಗ್ ಥಿಯೇಟರ್ (ಸಿಎಲ್ಟಿ) ಮತ್ತು ಶಾಶ್ವತ ಕಟ್ಟಡದಲ್ಲಿನ ಎರಡು ಹೊಸ ಪ್ರವೇಶ ದ್ವಾರಗಳು ಸೇರಿದಂತೆ ವಿವಿಧ ಸೌಲಭ್ಯಗಳನ್ನು ಉದ್ಘಾಟಿಸಲಿದ್ದಾರೆ.

ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಉಪರಾಷ್ಟ್ರಪತಿಗಳು ಅಧ್ಯಾಪಕರು ಮತ್ತು ಸಂಸ್ಥೆಯ ಸಿಬ್ಬಂದಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಸಮಾರಂಭದಲ್ಲಿ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ, ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಹಾಗೂ ಗಣಿ ಸಚಿವ ಪ್ರಲ್ಹಾದ ಜೋಶಿ, ವಿಧಾನ ಪರಿಷತ್ತ ಸಭಾಪತಿಗಳಾದ ಬಸವರಾಜ ಹೊರಟ್ಟಿ, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ ಅವರು ಉಪಸ್ಥಿತರಿರುವರು.

ಕಾರ್ಮಿಕ ಸಚಿವ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ, ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅದ್ಯಕ್ಷರಾದ ಶಾಸಕ ಅಬ್ಬಯ್ಯ ಪ್ರಸಾದ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ವಿನಯ ಕುಲಕರ್ಣಿ, ವಾಯುವ್ಯ ಸಾರಿಗೆ ನಿಗಮದ ಅದ್ಯಕ್ಷ ಹಾಗೂ ಶಾಸಕ ಭರಮಗೌಡ ಅಲಗೌಡ ಕಾಗೆ, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಜೆ.ಎಂ. ಗಣೇಶ, ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ, ಎನ್. ಹೆಚ್.ಕೋನರೆಡ್ಡಿ, ಎಸ್.ವಿ.ಸಂಕನೂರು, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ, ಬೇಲೂರ ಗ್ರಾಮ ಪಂಚಾಯತಿ ಅಧ್ಯಕ್ಷೆ ಸಾವಕ್ಕ ಬಿ. ಶಿರೂರು ಅತಿಥಿಗಳಾಗಿ ಭಾಗವಹಿಸುವರು.

ಐಐಟಿ ಧಾರವಾಡದ ನಿರ್ದೇಶಕ ಪ್ರೊಫೆಸರ್ ವೆಂಕಪ್ಪಯ್ಯ ಆರ್. ದೇಸಾಯಿ ಮತ್ತು ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಹಲವಾರು ಗಣ್ಯರು, ಐಐಟಿ ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಹಾಜರಿರುತ್ತಾರೆ ಎಂದು ಐಐಟಿ ಪ್ರಕಟಣೆ ತಿಳಿಸಿದೆ.

**ಉಪರಾಷ್ಟ್ರಪತಿಗಳ ಹುಬ್ಬಳ್ಳಿಯ ಕಾರ್ಯಕ್ರಮ:** ಗೌರವಾನ್ವಿತ ಉಪರಾಷ್ಟ್ರಪತಿಗಳು ಧಾರವಾಡ ಐಐಟಿಯ ಕಾರ್ಯಕ್ರಮದ ನಂತರ, ಸಂಜೆ 5 ಗಂಟೆಗೆ ಹುಬ್ಬಳ್ಳಿಯ ನೂತನ ಕೋರ್ಟ್ ಹತ್ತಿರದ ಎಂ.ಎಂ. ಜೋಶಿ ನೂತನ ಸೂಪರ್ ಸ್ಪೇಗಣಲಿಟಿ ಕಣ್ಣಿನ ಆಸ್ಪತ್ರೆಯ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

## ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಎಲೆಕ್ಟ್ರಾನಿಕ್ ಮತ್ತು ಡಿಜಿಟಲ್ ಮಾಧ್ಯಮದಲ್ಲಿ ತರಬೇತಿ

ಶಿವಮೊಗ್ಗ: ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ 2023–24 ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡಗಳ ಸಮುದಯದ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಎಲೆಕ್ಟ್ರಾನಿಕ್ ಮತ್ತು ಡಿಜಿಟಲ್ ಮಾಧ್ಯಮದಲ್ಲಿ ತರಬೇತಿ ನೀಡಲು ಆಫ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಜೈಲ್ ಸರ್ಕಲ್ ಶಿವಮೊಗ್ಗ, ದೂ.ಸಂ: 08182–276776 ನ್ನು ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಮಹಿಳಾ ಕ್ರೀಡಾಕೂಟ


ಶಿವಮೊಗ್ಗ: ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಮಾರ್ಚ–08 ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸುತ್ತಿದ್ದು, ಪ್ರಯುಕ್ತ ಪೂರ್ವಭಾವಿಯಾಗಿ ನಗರದ ನೆಹರೂ ಕ್ರೀಡಾಂಗಣದಲ್ಲಿ ಮಾ. 06 ಮತ್ತು 07 ರಂದು ಜಿಲ್ಲೆಯ ಮಹಿಳೆಯರಿಗಾಗಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಿದೆ. ಮಾ. 06 ಮತ್ತು 07 ರಂದು ಬೆಳಗ್ಗೆ 10.00 ರಿಂದ ವಾಲಿಬಾಲ್, ಥ್ರೋಬಾಲ್, ಅಥ್ಲೇಟಿಕ್ (100 ಮೀ, 800ಮೀ ಓಟ, ಉದ್ದ ಜಿಗಿತ ಮತ್ತು 200 ಮೀ, 100ಮೀ ಗುಂಡು ಎಸೆತ), ಹಗ್ಗಜಗ್ಗಾಟ, ಪಗಡೆ ಕ್ರಿಕೇಟ್, ಬಾಂಬ್ ಇನ್ದಿ ಸಿಟಿ, ಲಗೋರಿ ಹಾಗೂ ಭೌದ್ಧಿಕ ಸ್ಪರ್ಧೆಗಳಲ್ಲಿ ರಸಪ್ರಶ್ನೆ ಸ್ಪರ್ಧೆ, ಜಾನಪದ ಗೀತೆ ಮತ್ತು ಗೀಗೀಪದ ಸ್ಪರ್ಧೆಗಳನ್ನು ಆಯೋಜಿಸಿಲಾಗಿದೆ.

ಮಾ. 07 ರಂದು ಬೆಳಗ್ಗೆ 07.00 ರಿಂದ 5 ಕಿ.ಮೀ.ಮ್ಯಾರಾಥ–ಾನ್ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರೂ ಕ್ರೀಡಾಂಗಣ, ಶಿವಮೊಗ್ಗ, ದೂ.ಸಂ.: 08182–223328 ನ್ನು ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಅನುಪಯುಕ್ತ ಪರಿಕರಗಳ ಬಹಿರಂಗ ಹರಾಜು

ಬಳ್ಳಾರಿ: ಬಳ್ಳಾರಿಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ಇರುವ ಅನುಪಯುಕ್ತ ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್ ಪರಿಕರಗಳ, ಪೀಠೋಪಕರಣಗಳ ಹಾಗೂ ಕಚೇರಿಯ ಇಲಾಖಾ ವಾಹನಗಳ ಹಳೆ ಟೈರ್ಗಳ, ವಾಹನಗಳ ರಿಪೇರಿ ನಂತರ ಬದಲಾಯಿಸಿದ ಅನುಪಯುಕ್ತ ಬಿಡಿಭಾಗಗಳ ಬಹಿರಂಗ ಹರಾಜು ಪ್ರಕ್ರಿಯೆಯನ್ನು ಮಾರ್ಚ್ 14ರಂದು ವಿಲೇವಾರಿ ಮಾಡಲಾಗುತ್ತದೆ ಎಂದು ಕರ್ನಾಟಕ ಲೋಕಯುಕ್ತ ಪೊಲೀಸ್ ಅಧೀಕ್ಷಕರಾದ ಸಿದ್ಧರಾಜು.ಸಿ ಅವರು ತಿಳಿಸಿದ್ದಾರೆ. ಅನುಪಯುಕ್ತ ಪರಿಕರಗಳನ್ನು ಖರೀದಿಸಲು ಡಿ.ಡಿ ರೂಪದಲ್ಲಿ ರೂ.1000 ಮೊತ್ತದ ಇ.ಎಂ.ಡಿ ಜೊತೆಗೆ ದಿನಾಂಕ ಮಾರ್ಚ್ 11 ರಂದು ಅಥವಾ ಅದಕ್ಕಿಂತ ಮುಂಚಿತವಾಗಿ ಎಸ್.ಪಿ ಲೋಕಾಯುಕ್ತ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿಯ ಎಸ್.ಪಿ ಲೋಕಾಯುಕ್ತ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕ ಕುಂದುಕೊರತೆ ಸಭೆ



ಕೆಂಭಾವಿ: ಪಟ್ಟಣದ ಹೇಮರಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದಲ್ಲಿ ಮಾ. 2 ಶನಿವಾರ ಬೆಳಿಗ್ಗೆ 11 ಗಂಟೆಗೆ ಸಾರ್ವಜನಿಕ ಕುಂದುಕೊರತೆ ಸಭೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಹಶಿಲ್ದಾರರ ಕೆ. ವಿಜಯಕುಮಾರ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಸಭೆಯು ಜಿಲ್ಲಾ ಉಸ್ತುವಾರಿ ಹಾಗೂ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರಾದ ಶರಣಬಸಪ್ಪಗೌಡ ದರ್ಶನಾಪುರ ರವರ ಉಪಸ್ಥಿತಿಯಲ್ಲಿ ನಡೆಯಲಿದ್ದು, ಜಿಲ್ಲಾಧಿಕಾ–ರಿಗಳು ಅಧ್ಯಕ್ಷತೆ ವಹಿಸುವರು.

ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಸಚಿವರು ಪಟ್ಟಣದ ವಿವಿದ ಇಲಾಖೆಯ ಕಾಮಗಾ–ರಿಗಳ ಅಡಿಗಲ್ಲು ಸಮಾರಂಭ ಮತ್ತು ಉದ್ಘಾಟನಯನ್ನು ನೆರವೇ–ರಿಸಲಿರುವರು.

## ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸ–2024; ಸಮಾರೋಪ ಸಮಾರಂಭ

# ರಸ್ತೆ ಸುರಕ್ಷತೆ ನಿಯಮ ಪಾಲನೆಯಿಂದ ಅಪಘಾತ ತಡೆಗಟ್ಟಲು ಸಾಧ್ಯ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಜಿಲ್ಲೆಯಲ್ಲಿ ಇತ್ತೀಚಿಗೆ ರಸ್ತೆ ಅಪಘಾತದ ಪ್ರಕರಣಗಳು ಹೆಚ್ಚುತ್ತಿವೆ. ಅಪಘಾತದಲ್ಲಿ ಮರಣ ಹಾಗೂ ತೀವ್ರತರದ ಹಾನಿಗೊಳಗಾದ ಕುಟುಂಬ ವರ್ಗದವರು ಸಂಕಷ್ಟ ಅನುಭವಿಸುವುದನ್ನು ನಾವು ಕಾಣುತ್ತಿದ್ದೇವೆ. ರಸ್ತೆ ಸುರಕ್ಷತಾ ನಿಯಮಗಳನ್ನು ಸಾರ್ವಜನಿಕರು ಕಟ್ಟುನಿಟ್ಟಾಗಿ ಪಾಲಿಸುವುದ–ರಿಂದ ರಸ್ತೆ ಅಪಘಾತ ಪ್ರಕರಣಗಳನ್ನು ತಡೆಗಟ್ಟಲು ಸಾಧ್ಯ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಜಿಲ್ಲಾಡಳಿತ, ಸಾರಿಗೆ, ಪೊಲೀಸ್ ಹಾಗೂ ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಗುರುವಾರ (ಫೆ.26) ಕನ್ನಡ ಸಾಹಿತ್ಯ ಭವದಲ್ಲಿ ನಡೆದ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸ–2024ರ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಅತಿವೇಗ, ಓವರ್ ಟೇಕ್ ಹಾಗೂ ನಿರ್ವಹಣೆ ಕೊರತೆಯಿಂದ ಮಾರಣಾಂತಿ–ಕ ಅಪಘಾತಗಳಿಗೆ ಕಾರಣವಾಗಬಹುದು. ಚಾಲನೆ ಮಾಡುವಾಗ ಸ್ವಯಂ–ಶಿಸ್ತು ಹಾಗೂ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ವಾಹನಗಳನ್ನು ಚಲಾಯಿಸಿದರೆ ಅಪಘಾತ ಪ್ರಕರಣಗಳನ್ನು ಕಡಿಮೆ ಮಾಡಬಹುದು ಎಂದು ತಿಳಿಸಿದರು.

ಇತ್ತೀಚಿಗೆ ಜಿಲ್ಲೆಯ ಗ್ರಾಮೀಣ ಹಾಗೂ ನಗರದಲ್ಲಿ ಸುಮಾರು 1064 ಅಪಘಾತ ಪ್ರಕರಣಗಳು ಕಂಡು ಬಂದಿವೆ. ಯಾವುದೇ ಸುರಕ್ಷತೆ ಇಲ್ಲದೇ ಜೀವದ ಹಂಗು ತೊರೆದು ವಾಹನಗಳನ್ನು ಚಲಾಯಿಸಬಾರದು. ಶಾಲಾ ವಾಹನಗಳು, ಆಟೋರಿಕ್ಷಾ ಹಾಗೂ ಬಸ್ ಗಳಲ್ಲಿ ಹೆಚ್ಚು ಜನರನ್ನು ತುಂಬಿಕೊಂಡು ಹೋಗುತ್ತಿರುವುದು ಕಂಡುಬರುತ್ತಿವೆ. ವಾಹನಗಳಲ್ಲಿ ಅಗತ್ಯಕ್ಕಿಂತ ಹೆಚ್ಚು ಜನರನ್ನು ತುಂಬಿಕೊಂಡು ವಾಹನ ಚಲಾಯಿಸುವುದು ಕೂಡ ಕೆಲವೊಮ್ಮೆ ರಸ್ತೆ ಅಪಘಾತಗಳಿಗೆ ಕಾರಣವಾಗಬಹುದು. ಅಪಘಾತ ಪ್ರಕರಣಗಳು ಆಗಿರುವ ಸ್ಥಳಗಳನ್ನು ಗುರುತಿಸಿ ರಸ್ತೆಗಳನ್ನು ಸುಧಾರಣೆಗೆ ತರಲಾಗುವುದು. ರಸ್ತೆ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಸಾರಿಗೆ ಇಲಾಖೆಯಿಂದ ಇನ್ನೂ ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುವುದು. ರಸ್ತೆ ಅಪಘಾತಗಳಿಂದ ಉಂಟಾಗುವ ಸಾವು ಮತ್ತು ಗಾಯಗಳ ಸಂಖ್ಯೆಯನ್ನು ಕಡಿಮೆ ಮಾಡುವುದು ಜಾಗೃತಿ




ಕಾರ್ಯಕ್ರಮಗಳ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಹೇಳಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ಅವರು ಮಾತನಾಡಿ, ನಿಮ್ಮ ಕುಟುಂಬಗಳಿಗಾಗಿ ರಸ್ತೆ ಸಂಚಾರ ನಿಯಮಗಳನ್ನು ಪ್ರತಿಯಾಬ್ಬರೂ ಪಾಲಿಸಬೇಕು. ಹೆಲ್ಮೆಟ್, ಸಿಟ್ ಬೆಲ್ಟ್ ಧರಿಸಿ ನಿಯಮಗಳನ್ನು ಪಾಲಿಸುವುದರ ಮೂಲಕ ಜೀವ ಸಂರಕ್ಷಣೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ವರದಿಯ ಪ್ರಕಾರ ನಗರದಲ್ಲಿ ರಸ್ತೆ ಅಪಘಾತಗಳ ಸಂಖ್ಯೆಗಳು ಹೆಚ್ಚುತ್ತಿವೆ. ಅಪಘಾತಗಳಲ್ಲಿ ಮೃತರಾದವರ ಸಂಖ್ಯೆಗಳಲ್ಲಿ ಹೆಲ್ಮೆಟ್ ಧರಿಸದೆ ಮೃತರಾದವರ ಸಂಖ್ಯೆ ಹೆಚ್ಚಾಗಿದೆ ಆದ್ದರಿಂದ ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧ–ರಿಸಬೇಕು ಎಂದು ತಿಳಿಸಿದರು.

ಟ್ರ್ಯಾಕ್ಟರ್, ಲಾರಿ, ಬಸ್ ಸೇರಿದಂತೆ ಸಾಕಷ್ಟು ರಸ್ತೆ ಅಪಘಾತ ಪ್ರಕರಣಗಳನ್ನು ನಾವು ನೋಡಿದ್ದೇವೆ. ಅದರಲ್ಲಿ ಬಹುಪಾಲು ಪ್ರಕರಣಗಳನ್ನು ರಸ್ತೆ ಸುರಕ್ಷತೆ ನಿಯಮಗಳನ್ನು ಉಲ್ಲಂಘನೆಗೆ ಮಾಡುವುದರ ಮೂಲಕ ಆಗಿರುತ್ತವೆ. ಆದ್ದರಿಂದ ಪ್ರತಿಯಾಬ್ಬರು ಈ ಕುರಿತು ಜಾಗೃತಿ ವಹಿಸಿ ಸುರಕ್ಷತೆಯಿಂದ ವಾಹನ ಚಲಾಯಿಸಬೇಕು ಎಂದು ಡಾ. ಭೀಮಾಶಂಕರ ಗುಳೇದ ಅವರು ಸಲಹೆ ನೀಡಿದರು.

ಜಾಗೃತಿ ಚಿತ್ರಕಲೆ ಪ್ರದರ್ಶನ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ ಅವರು ಕಾರ್ಯಕ್ರಮದಲ್ಲಿ ಸಾರ್ವಜನಿಕ–ರಿಗೆ ರಸ್ತೆ ಸುರಕ್ಷತೆ ಕುರಿತು ಚಿತ್ರಿಸಿದ ಜಾಗೃತಿ ಮೂಡಿಸುವ ಚಿತ್ರಕಲೆಗಳನ್ನು ಪ್ರದರ್ಶಿಸಿದರು.

ಬೆಳಗಾವಿ ವಿಭಾಗದ ಸಾರಿಗೆ ಜಂಟಿ ಆಯುಕ್ತೆ ಎಂ.ಪಿ ಓಂಕಾರೇಶ್ವರಿ, ಬೆಳಗಾವಿ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿ ನಾಗೇಶ್ ಮುಂಡಾಸ, ವಿಜಯವಾಣಿ ಸ್ಥಾನಿಕ ಸಂಪಾದಕ ಮಹೇಶ ವಿಜಾಪುರ, ಬೆಳಗಾವಿ ಸಿಟಿಇ ಕಾಲೇಜು ಪ್ರಾಚಾರ್ಯರಾದ ಎಂ. ಎಂ ಸಿಂಧೂರ, ಸಾರಿಗೆ ಇಲಾಖೆ ಅಧಿಕಾರಿ ಸಿಬ್ಬಂದಿಗಳು ಸೇರಿದಂತೆ ವಿವಿಧ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರು, ವಿದ್ಯಾರ್ಥಿಗಳು, ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತ–ರಿದ್ದರು.

ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ; ಜಾಗೃತಿ ಜಾಥಾ: ಇದಕ್ಕೂ ಮುಂಚೆ ಆರ್.ಟಿ.ಓ ವೃತ್ತದಲ್ಲಿ ನಿವೃತ್ತ ನಗರ ಪೊಲೀಸ್ ಆಯುಕ್ತ ಎಸ್.ಎನ್ ಸಿದ್ದರಾಮಪ್ಪ ಅವರು ದ್ವಿಚಕ್ರ ವಾಹನಕ್ಕೆ ಹಸಿರು ನಿಶಾನೆ ತೋ–ರಿಸುವ ಮೂಲಕ ಜಾಗೃತಿ ಜಾಥಾಗೆ ಚಾಲನೆ ನೀಡಿದರು.

ಆರ್.ಟಿ.ಓ ವೃತ್ತದಿಂದ ಪ್ರಾರಂಭವಾದ ಜಾಥಾ ರಾಣಿ ಚನ್ನಮ್ಮ ವೃತ್ತದ ಮಾರ್ಗವಾಗಿ ಕೊಲ್ಹಾಪುರ ಸರ್ಕಲ್ ವರೆಗೆ ಸಂಚರಿಸಿ ಬಳಿಕ ಮತ್ತೆ ರಾಣಿ ಚನ್ನಮ್ಮ ವೃತ್ತದವರೆಗೆ ಬಂದು ಸಮಾರೋಪಾಗೊಂಡಿತು. ಜಾಥಾದಲ್ಲಿ ವಿದ್ಯಾರ್ಥಿಗಳಿಂದ ಸಾರಿಗೆ ನಿಯಮಗಳ ಕುರಿತು ಜಾಗೃತಿ ಫಲಕಗಳನ್ನು ಪ್ರದರ್ಶಿಸಲಾಯಿತು. ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಸಾರಿಗೆ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಹಾಗೂ ವಿವಿಧ ಶಿಕ್ಷಣ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಅರ್ಜಿ ಆಹ್ವಾನ

ಬೆಳಗಾವಿ: ತೋಟಗಾರಿಕೆ ಇಲಾಖೆಯ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ತೋಟಗಾ–ರಿಕೆ ವಿಸ್ತರಣೆ ಮತ್ತು ತರಬೇತಿ ಕಾರ್ಯಕ್ರಮದಡಿ 2024–25 ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಪುರುಷ ಹಾಗೂ ಮಹಿಳಾ ರೈತರ ಮಕ್ಕಳಿಗೆ ಹುಕ್ಕೇರಿ ತಾಲೂಕಿನ ಹಿಡಕಲ್ ಡ್ಯಾಂ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಯು 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಯ ತಂದೆ, ತಾಯಿ, ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಕನಿಷ್ಠ ವಯೋಮಿತಿ 18 ವರ್ಷ ಗರಿಷ್ಠ 30ವರ್ಷ ಆಗಿರಬೇಕು. ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ಕನಿಷ್ಟ 18 ವರ್ಷ ಗರಿಷ್ಟ 33 ವರ್ಷ ಮತ್ತು ಮಾಜಿ ಸೈನಿಕರಿಗೆ ಕನಿಷ್ಟ 33 ವರ್ಷ ಗರಿಷ್ಟ 65 ವರ್ಷ ವಯೋಮಿತಿ ಇರುತ್ತದೆ.

ಆಸಕ್ತರು ಮಾ.1 ರಿಂದ ಮಾ.30 ಒಳಗಾಗಿ ಅರ್ಜಿಯನ್ನು ಇಲಾಖೆಯ ವೆಬ್‌ಸೆಟ್ https://horticulturedir.karnataka.gov.in ನಲ್ಲಿ ಆಠತಿಟಟಠಚಿಜ ಮಾಡಿ, ಭರ್ತಿ ಮಾಡಿ ಅರ್ಜಿಗಳನ್ನು ಏ.1 ಸಂಜೆ 5.30 ಗಂಟೆಯವರೆಗೆ ತೋಟಗಾರಿಕೆ ಉಪನಿರ್ದೇಶಕರು (ಜಿ.ಪಂ) ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಅರ್ಜಿಯನ್ನು ಸಲ್ಲಿಸುವುದು.

ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಏ.6 ರಂದು ಬೆಳಗ್ಗೆ 11 ಗಂಟೆಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯಲ್ಲಿ ನೇರವಾಗಿ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9448863810, 9980065304 ಮತ್ತು 9742414741 ಗಳಿಗೆ ಸಂಪರ್ಕಿಸಬಹುದು ಅಥವಾ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇ–ರಿಗೆ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಗು ಜೋರಾಗಿ ಅತ್ತಿದಕ್ಕೆ ನೆಲಕ್ಕೆ ಎಸೆದು ಪೈಶಾಚಿಕ ಕೃತ್ಯ ಎಸಗಿದ ತಂದೆ



ಧಾರವಾಡ: ಮಗು ಬಹಳ ಅಳುತ್ತದೆ ಎಂದು ಅದನ್ನು ಸಮಾಧಾನ ಮಾಡಲಾಗದೇ ತಂದೆಯೊಬ್ಬ ತನ್ನ ಹೆಣ್ಣು ಮಗುವನ್ನೇ ನೆಲಕ್ಕೆ ಎಸೆದು ಪೈಶಾಚಿಕ ಕೃತ್ಯ ಮೆರೆದಿರುವ ಘಟನೆ ಧಾರವಾಡ ತಾಲೂಕಿನ ಯಾದವಾಡ ಗ್ರಾಮದಲ್ಲಿ ನಡೆದಿದೆ.

ಶಂಭುಲಿಂಗಯ್ಯ ಶಹಾಪುರಮಠ ಎಂಬ ತಂದೆಯೇ ತನ್ನ ಒಂದು ವರ್ಷದ ಹೆಣ್ಣು ಮಗುವನ್ನು ಗೋಡೆಗೆ ಎಸೆದ ಪಾಪಿ ತಂದೆ. ಕಳೆದ ರಾತ್ರಿ ಮಗು ವಿಪರೀತ ಅಳುತ್ತಿತ್ತು. ಅದನ್ನು ಸಮಾಧಾನ ಮಾಡಲಾಗದೇ ಶಂಭುಲಿಂಗಯ್ಯ ನೆಲಕ್ಕೆ ಎತ್ತಿ ಬಿಸಾಕಿದ್ದಾನೆ. ಇದ–ರಿಂದ ಮಗುವಿನ ತಲೆಗೆ ಬಲವಾದ ಪೆಟ್ಟು ಬಿದ್ದಿದೆ.

ಸದ್ಯ ಮಗುವಿಗೆ ಕಿಮ್ಸ್‌ನ ಐಸಿಯುನಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಕುಟುಂಬಸ್ಥರು ಪಾಪಿ ತಂದೆ ಶಂಭುಲಿಂಗಯ್ಯನ ವಿರುದ್ಧ ದೂರು ನೀಡಿದ್ದು, ಗರಗ ಠಾಣೆ ಪೊಲೀಸರು ಶಂಭುಲಿಂಗಯ್ಯನನ್ನು ವಶಕ್ಕೆ ಪಡೆದಿದ್ದಾರೆ.

## ನೀತಿ ಸಂಹಿತೆ ಉಲ್ಲಂಘಿಸಿದರೆ ಕಠಿಣ ಕ್ರಮ

# ತರಬೇತಿ ಕಾರ್ಯಕ್ರಮದಲ್ಲಿ ಜಿಪಂ ಸಿಇಒ ರಾಹುಲ್ ಶಿಂಧೆ ಎಚ್ಚರಿಕೆ

ಬೆಳಗಾವಿ: ಲೋಕಸಭೆಯ ಸಾರ್ವತ್ರಿಕ ಚುನಾವಣೆಯಲ್ಲಿ ನ್ಯಾಯ ಸಮ್ಮತವಾದ ಪ್ರಕ್ರಿಯೆ ಮಾಡಬೇಕು. ಚುನಾವಣಾ ಆಯೋಗವು ಸೂಚಿಸಿದ ನಿಯಮಗಳ ಪಾಲನೆ ಆಗಬೇಕು. ಈ ಸಂದರ್ಭದಲ್ಲಿ ನೀತಿ ಸಂಹಿತೆಯ ಉಲ್ಲಂಘನೆ ಮಾಡಿದಲ್ಲಿ ಕಠಿಣ ಕ್ರಮಕ್ಕೆ ಗು–ರಿಯಾಗಬೇಕಾಗುತ್ತದೆ ಎಂದು ಚಿಕ್ಕೋಡಿ ಲೋಕಸಭೆ ಕ್ಷೇತ್ರ ಚುನಾವಣಾಧಿಕಾರಿ ಹಾಗೂ ಜಿಪಂ ಸಿಇಒ ರಾಹುಲ್ ಶಿಂಧೆ ತಿಳಿಸಿದರು.

ಚಿಕ್ಕೋಡಿ ಪಟ್ಟಣದ ಕನ್ವೆನ್ಷನ್ ಹಾಲ್‌ನಲ್ಲಿ ಗುರುವಾರ (ಫೆ.29) ಚಿಕ್ಕೋಡಿ ಲೋಕಸಭಾ ಚುನಾವಣೆ ಮಾದರಿ ನೀತಿ ಸಂಹಿತೆ ಕು–ರಿತು ಅಧಿಕಾರಿಗಳಿಗೆ ಒಂದು ದಿನದ




ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮುದಾಯಗಳ ನಡುವೆ, ಧಾರ್ಮಿಕ ಅಥವಾ ಭಾಷಿಕ ನಡುವೆ ಉದ್ವಿಗ್ನತೆ ಉಂಟುಮಾಡುವ ಯಾವುದೇ ಚಟುವಟಿಕೆಗೆ ಅವಕಾಶ ನೀಡಬಾರದು. ಲೋಕಸಭೆ ಚುನಾವಣೆಯಲ್ಲಿ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಉತ್ತಮ ರೀತಿಯಲ್ಲಿ ಕೆಲಸ ಮಾಡುವ ಮೂಲಕ ಚುನಾವಣೆ ಯಶಸ್ವಿಗೊಳಿಸಬೇಕು ಎಂದರು.

ವಿಶೇಷ ಜಿಲ್ಲಾಧಿಕಾರಿ ಗೀತಾ ಕೌಲಗಿ ಮಾತನಾಡಿ, ಭಾರತ ಹೊರತುಪಡಿಸಿ ವಿಶ್ವದ ಯಾವುದೇ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿಯೂ ಮಾದರಿ ನೀತಿ ಸಂಹಿತೆ ಪರಿಕಲ್ಪನೆ ಇಲ್ಲ. 1960 ಕೇರಳ ವಿಧಾನಸಭೆ ಚುನಾವಣೆಯಲ್ಲಿ ಚುನಾವಣಾ ಆಯೋಗವು ಮೊದಲ ಬಾರಿಗೆ ಮಾದರಿ ನೀತಿ ಸಂಹಿತೆ ಜಾರಿ ಮಾಡಿತು. ಚುನಾವಣೆಗೆ ಸ್ಪರ್ಧಿಸುತ್ತಿರುವ ಅಭ್ಯರ್ಥಿಗಳು, ಆಯಾ ಪಕ್ಷಗಳು ಯಾವ ರೀತಿ ನಡೆದುಕೊಳ್ಳಬೇಕು. ಯಾವ ರೀತಿ ಪ್ರಚಾರ ಕೈಗೊಳ್ಳಬೇಕು. ಅಭ್ಯರ್ಥಿಗಳು ಹಾಗೂ ಮತದಾರರು ಏನು ಮಾಡಬಾರದು. ಯಾವ ವಿಚಾರವನ್ನು ಗಮನದಲ್ಲಿಡಬೇಕು ಎಂಬುದರ ಬಗ್ಗೆ ತರಬೇತಿ ನೀಡಲಾಗುತ್ತದೆ. ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಸರಿಯಾಗಿ ತರಬೇತಿ ಪಡೆದು ತಮ್ಮ ಕರ್ತವ್ಯ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಚಿಕ್ಕೋಡಿ ಡಿ. ಎಸ್.ಪಿ ಗೋಪಾಲ ಕೃಷ್ಣಗೌಡರ, ಪ್ರಶಾಂತ್ ಕುಮಾರ್ ಅಬಕಾರಿ ಇಲಾಖೆ ಡಿಸಿ, ಉಪವಿಭಾಗಾಧಿಕಾರಿ ಮೆಹಬೂಬ ಎನ್, ಜಿಲ್ಲಾ ಚುನಾವಣೆ ವೆಚ್ಚದ ನೋಡಲ್ ಅಧಿಕಾರಿ ಶಂಕರಾನಂದ ಬನಶಂಕರಿ, ರಾಷ್ಟ್ರೀಯ ಮಟ್ಟದ ಮಾಸ್ಟರ್ ಟ್ರೈನರ್ ಎನ್.ವಿ ಶಿರಗಾಂವಕರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳು ಆಡಳಿತ ರೇಖಾ ಡೊಳ್ಳಿನವರ, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿಗಳು ಅಭಿವೃದ್ಧಿ ಬಸವರಾಜ ಅಡವಿಮಠ, ಎ.ಆರ್.ಓ ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಶೀಲ್ದಾರರು, ಸೆಕ್ಟರ್ ಅಧಿಕಾ–ರಿಗಳು, ಎಫ್.ಎಸ್.ಟಿ, ಎಸ್,ಎಸ್,ಟಿ, ವಿ,ಎಸ್,ಟಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಕಿತ್ತೂರು ರಾಣಿ ಚನ್ನಮ್ಮಗೆ ಸಾಮ್ರಾಜ್ಯ ಶಾಹಿ ಮನೋಭಾವ ಇರಲಿಲ್ಲ




ಬೆಳಗಾವಿ: ಗುರುವಾರ ಮ.ನ. ರ. ಸಂಘದ ಮಹಾಂತ ಭವನದಲ್ಲಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಬೆಳಗಾವಿಯ ರಾಣಿ ಚನ್ನಮ್ಮ ಅಧ್ಯಯನ ಪೀಠ ಹಾಗೂ ಮಹಾಂತೇಶ ನಗರ ರಹವಾಸಿಗಳ ಸಂಘದ ಶಿಕ್ಷಣ ಮಹಾವಿದ್ಯಾಲಯದ ಇತಿಹಾಸ ಸಂಘದ ಅಡಿಯಲ್ಲಿ 2023 – 24 ನೇ ಯ ವಿಶೇಷ ಸರಣಿ ಉಪನ್ಯಾಸಗಳ ಮಾಲಿಕೆಯಲ್ಲಿ 7 ನೇ ವಿಶೇಷ ಉಪನ್ಯಾಸ ಕಿತ್ತೂರು ರಾಣಿ ಚನ್ನಮ್ಮ ಮಹಿಳಾ ವ್ಯಕ್ತಿತ್ವದ ಚಾರಿತ್ರಿಕ ಅನಾವರಣ ಎಂಬ ವಿಷಯದ ಮೇಲೆ ಏರ್ಪಡಿಸಲಾಗಿತ್ತು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕನ್ನಡ ವಿಭಾಗ ಸಹಾಯಕ ಪ್ರಾಧ್ಯಾಪಕರಾದ ಡಾ.ಗಜಾನನ ನಾಯ್ಕ ರವರು ತಮ್ಮ ವಿಶೇಷ ಉಪನ್ಯಾಸದಲ್ಲಿ ಸ್ಥಳೀಯ ಇತಿಹಾಸದ ನಾಯಕರನ್ನು ಓದುವ ಬದಲಾಗಿ ಪಠ್ಯದಲ್ಲಿ ವಿದೇಶದ ಇತಿಹಾಸದ ನಾಯಕರನ್ನ ಪಠ್ಯದಲ್ಲಿ ಓದುತ್ತಿರುವುದು ದುರಂತ. ಸರಿಯಾದ ಆಕರಗಳ ಲಭ್ಯತೆ ಮತ್ತು ನಿರೂಪಣಾ ಕ್ರಮ ಸರಿಯಾಗಿಲ್ಲದಿರುವ ಕಾರಣ ಚಾರಿತ್ರಿಕ ನಿಜವಾದ ಸ್ಥಳೀಯ ನಾಯಕರ ಕುರಿತಾದ ಮಾಹಿತಿ ತಡವಾಗಿ ಬೆಳಕಿಗೆ ತರಲಾಗಿದೆ. ರಾಣಿ ಚನ್ನಮ್ಮಗೆ ಸಾಮ್ರಾಜ್ಯ ಶಾಹಿ ಮನೋಭಾವನೆ ಇರಲಿಲ್ಲ. ಸಮಾಧಿಯ ಮೇಲೆ ಭಾರತೀಯ ಹೆಣ್ಣುಮಗಳು ಸಾಮ್ರಾಜ್ಯ ಸ್ಥಾಪನೆ ಮಾಡಿದ ಉದಾಹರಣೆಗಳು ಚರಿತ್ರೆಯಲ್ಲಿಯೇ ಇಲ್ಲ. ಮನೆತನದ ಗೌರವಕ್ಕೆ ಧಕ್ಕೆ , ಸ್ವಾಭಿಮಾನಕ್ಕೆ ಅಪಾಯ ಬಂದಾಗ ಮುಂದಾಳುತ್ವವನ್ನು ವಹಿಸಿಕೊಂಡಿದ್ದಾಳೆ.

ಬ್ರಿಟಿಷ ಸಾಮ್ರಾಜ್ಯ ಶಾಹಿತ್ವವನ್ನು ಸದೆ ಬಡಿದು ವಿಜಯ ಪಡೆದು 200 ವರ್ಷಗಳು ಗತಿಸಿವೆ . ಈ ಸಂಭ್ರಮಾಚರಣೆ ಸಂದರ್ಭದಲ್ಲಿ ಮಹಿಳೆಯರ ಬೌದ್ಧಿಕ ಮತ್ತು ಮಾನಸಿಕ ಮಟ್ಟವನ್ನು ಉನ್ನತೀಕರಿಸುವ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮರ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರೊ.ಎಸ್.ಎಂ. ಗಂಗಾಧರಯ್ಯ ನಿರ್ದೇಶಕರು ರಾಣಿ ಚನ್ನಮ್ಮ ಅಧ್ಯಯನ ಪೀಠ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ ರವರು ಪ್ರಶಿಕ್ಷಣಾರ್ಥಿಗಳನ್ನು ಉದ್ದೇಶಿಸಿ ಭೂಮಿಯ ಮೇಲೆ ಕೋಟಿ ಕೋಟಿ ಜನ ಬದುಕಿದರು ಆದರೆ ಎಲ್ಲರೂ ಇತಿಹಾಸ ಸೃಷ್ಟಿಸಲಿಲ್ಲ . ಇತಿಹಾಸ ಸೃಷ್ಟಿಸಿದ ಕೆಲವೆ ಕೆಲವರಲ್ಲಿ ರಾಣಿ ಚನ್ನಮ್ಮ ಅಗ್ರ ಗಣ್ಯಳು. ರಾಣಿ ಚನ್ನಮ್ಮಳ ಇತಿಹಾಸ ಹಾಗೂ ವ್ಯಕ್ತಿತ್ವವನ್ನು ವಿದ್ಯಾರ್ಥಿಗಳು ರೂಢಿಸಿಕೊಳ್ಳಬೇಕು ಇದರಿಂದ ಮಹಿಳಾ ಸಬಲೀಕರಣ ಸಾಧ್ಯವಾಗುತ್ತದೆ ಎಂದು ಹೇಳಿದರು. ಪ್ರಶಿಕ್ಷಣಾರ್ಥಿ ಕು. ಪೂಜಾ ಪೂಜೇರಿ ತಂಡ ಪ್ರಾರ್ಥಿಸಿದರು, ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ. ನಿರ್ಮಲಾ ಬಟ್ಟಲ ರವರು ಸ್ವಾಗತಿಸಿದರು. ಡಾ. ಮಹೇಶ ಗಾಜಪ್ಪನವರ ಸಂಯೋಜ–ಕರು ರಾಣಿ ಚನ್ನಮ್ಮ ಅಧ್ಯಯನ ಪೀಠ ರವರು ಪ್ರಸ್ತಾವಿಕ ಹಾಗೂ ಉಪನ್ಯಾಸಕರ ಪರಿಚಯ ಮಾಡಿದರು. ಡಾ. ಎಸ್. ವಿ. ವಾಲಿ ಶೆಟ್ಟಿ ಸಹಾಯಕ ಪ್ರಾಧ್ಯಾಪಕರು ವಂದಿಸಿದರು. ಪ್ರೊ.ಮಂಜುನಾಥ ಕಲಾಲ ಹಾಗೂ ಪ್ರೊ.ಸೋನಲ ಚಿನಿವಾಲ ಸಹಾಯಕ ಪ್ರಾಧ್ಯಾಪಕರು ನಿರೂಪಿಸಿದರು.

## ಎದೆ ಮೇಲೆ ದರ್ಶನ್ ಫೋಟೋ ಟ್ಯಾಟೂ ಹಾಕಿಸಿಕೊಂಡ ಮಹಿಳಾ ಅಭಿಮಾನಿ




ಬೆಂಗಳೂರು: ಅಭಿಮಾನಕ್ಕೆ ಸೋಲದವರು ಯಾರಿದ್ದಾರೆ ಹೇಳಿ?. ಕೆಲವರಂತೂ ತಮಗಿಷ್ಟವಾದ ವ್ಯಕ್ತಿಯ ಹೆಸರು, ಫೋಟೋವನ್ನು ಹಚ್ಚೆ ಹಾಕಿಸಿಕೊಳ್ಳುತ್ತಾರೆ. ಅದರಂತೆ ಕೆಲವರು ನಟ–ನಟಿಯ ಹೆಸರನ್ನ ಟ್ಯಾಟೂ ಹಾಕಿಸಿಕೊಳ್ಳೋದು ಮಾಮುಲಿ. ಆದರೆ ಮಹಿಳೆಯೊಬ್ಬರು ನಟ ಡಿ ಬಾಸ್ ದರ್ಶನ್ ಅವರ ಫೋಟೋವನ್ನೇ ಎದೆ ಮೇಲೆ ಹಚ್ಚೆ ಹಾಕಿಸಿಕೊಂಡಿದ್ದು, ಸಾಮಾಜಿಕ ಜಾಲತಾಣದಲ್ಲಿ ಈ ದೃಶ್ಯ ವೈರಲ್ ಆಗಿದೆ.

ನಟ ದರ್ಶನ್ 'ನನ್ನ ಪ್ರೀತಿ ಸೆಲೆಬ್ರಿಟೀಸ್' ಎಂದು ಎದೆ ಮೇಲೆ ಟ್ಯಾಟೂ ಹಾಕಿಸಿಕೊಂಡಿದ್ದಾರೆ. ಅತ್ತ ಫ್ಯಾನ್ಸ್ ಕೂಡ ಅದರಲ್ಲೂ ಹೆಚ್ಚಾಗಿ ಯುವಕರು ನಟ ದರ್ಶನ್ ಹೆಸರನ್ನೇ ಎದೆ ಮೇಲೆ, ಕೈಯ ಮೇಲೆ, ಬೆನ್ನ ಮೇಲೆ ಟ್ಯಾಟೂ ಹಾಕಿಸಿಕೊಳ್ಳೋದನ್ನ ಕಂಡಿರಬಹುದು. ಹಾಗಂತ ಮಹಿಳೆಯರು ಏನು ಕಡಿಮೆ ಇಲ್ಲ. ಬಹುತೇಕ ಯುವತಿಯಲ್ಲಿ ಕೈ ಮೇಲೆಯೇ ಹಚ್ಚೆ ಹಾಕಿಸಿಕೊಂಡಿರೋದನ್ನ ಕಾಣಬಹುದು. ಆದರೆ ಇಲ್ಲೊಬ್ಬರು ಮಹಿಳೆ ಎದೆ ಮೇಲೆ ಡಿ ಬಾಸ್ ಫೋಟೋವನ್ನು ಹಚ್ಚೆ ಹಾಕಿಸಿಕೊಂಡಿದ್ದಾರೆ. ಯಾರು ಈ ಮಹಿಳೆ? ಈಕೆ ಹೆಸರು ಮಮತಾ. ದರ್ಶನ್ ಅವರ ಕಟ್ಟಾ ಅಭಿಮಾನಿ. ಹಾಗಾಗಿ ಅವರ ಫೋಟೋವನ್ನೇ ಎದೆ ಮೇಲೆ ಟ್ಯಾಟೂ ಹಾಕಿಸಿಕೊಂಡಿದ್ದಾರೆ. ಜೊತೆಗೆ ಡಿ ಬಾಸ್ ಎಂದು ಬರೆಸಿಕೊಂಡಿದ್ದಾರೆ. ಇಷ್ಟು ಮಾತ್ರವಲ್ಲ ಕೈಯಲ್ಲೂ ದರ್ಶನ್ ಫೋಟೋ ಹಚ್ಚೆ ಹಾಕಿಸಿಕೊಂಡಿದ್ದಾರೆ. ಸದ್ಯ ಇನ್ಸ್ಟಾಗ್ರಾಂನಲ್ಲಿ ಇವರ ಟ್ಯಾಟೂ ವಿಡಿಯೋ ವೈರಲ್ ಆಗುತ್ತಿದೆ.

ಇವಿಷ್ಟು ಮಾತ್ರವಲ್ಲ, ಮಮತಾ ಹೆಚ್ಚಾಗಿ ದರ್ಶನ್ ಅವರ ಹಾಡಿಗೆ ರೀಲ್ಸ್ ಮಾಡುತ್ತಿರುತ್ತಾರೆ. ಇವರ ಅಭಿಮಾನವನ್ನು ಕಂಡು ದರ್ಶನ್ ಫ್ಯಾನ್ಸ್ ಮಾತ್ರ ಫಿದಾ ಆಗಿದ್ದಾರೆ. ವಿಡಿಯೋ ಕಂಡು ಬಗೆ ಬಗೆಯ ಕಾಮೆಂಟ್ ಬರೆಯುತ್ತಿದ್ದಾರೆ.

## ಗ್ರಾಮಗಳಲ್ಲಿ ಕುಡಿಯುವ ನೀರಿನ ಅಗತ್ಯ ಕ್ರಮ ಕೈಗೊಳ್ಳಬೇಕು: ರಾಮರಡ್ಡಿ ಪಾಟೀಲ್

ಬೆಳಗಾವಿ: ಬರ ಹಿನ್ನೆಲೆಯಲ್ಲಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗುವ ಸಾಧ್ಯತೆ ಇರುವ ಗ್ರಾಮಗಳಲ್ಲಿ ಕುಡಿಯುವ ನೀರಿನ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಮರಡ್ಡಿ ಪಾಟೀಲ್ ಅವರು ಹೇಳಿದರು.

ಸ್ಥಳೀಯ ತಾಲ್ಲೂಕ ಪಂಚಾಯತ ಸಭಾಭವನದಲ್ಲಿ (ಫೆ.29) ಗುರುವಾರ ಆಯೋಜಿಸಿದ್ದ ಗ್ರಾಮೀಣ ಪ್ರದೇಶದ ಕುಡಿಯುವ ನೀರಿನ ವ್ಯವಸ್ಥೆಯ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕುಡಿಯುವ ನೀರಿನ ಅಭಾವ ಇರುವ ಗ್ರಾಮ ಪಂಚಾಯತಿವರು ಮುಂಜಾಗ್ರತೆ ವಹಿಸಿ ಮೇಲಾಧಿಕಾರಿಗಳಗೆ ವರದಿ ಮಾಡಬೇಕು. ಯಾವುದೇ ಗ್ರಾಮಗಳಲ್ಲಿ ಕೂಡಿಯುವ ನೀರಿನ ತೊಂದರೆಯಾಗಂತೆ



ನೋಡಿಕೊಳ ಬೇಕು. ತಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಎಲ್ಲ ಗ್ರಾಮಗಳಿಗೆ ಪಿಡಿಒ ಅವರು ಭೇಟಿ ನೀಡಿ ಕುಡಿಯುವ ನೀರಿನ ಕುರಿತ ಮಾಹಿತಿಯನ್ನು ಪಡೆದುಕೊಂಡು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿಕೊಡಬೇಕು ಎಂದು ತಿಳಿಸಿದರು.

ಕೆಲವು ಗ್ರಾಮಗಳಲ್ಲಿ ಜೆಜೆಎಮ್ ಕಾಮಗಾ–ರಿಗಳು ಪೂರ್ಣವಾಗಿವೆ ಅಂತಹ ಗ್ರಾಮಗಳಲ್ಲಿ ಪೈಪಲೈನ್ ಜೋಡಿಸಿ ಗ್ರಾಮಗಳಿಗೆ ನೀರನ್ನು ಸರಬರಾಜು ಮಾಡಬೇಕು. ಅಗತ್ಯ ಇರುವ ಗ್ರಾಮಗಳ್ಲಲಿ ಖಾಸಗಿ ಬೋರ್ವೆಲ್ ಗಳ ಮೂಲಕ ಗ್ರಾಮಗಳಿಗೆ ನೀರು ಪೊರೈಸಬೇಕು ಎಂದು ಹೇಳಿದರು.

ಸಭೆಯಲ್ಲಿ ತಹಶೀಲ್ದಾರ ಸಿದ್ದರಾಯ ಭೋಸಗಿ ಸಹಾಯಕ ಕಾರ್ಯನಿರ್ವಾಹಕ ಇಂಜಿಮಿಯರ್ ಎಸ್.ಕೆ. ಪಾಟೀಲ, ಸಹಾಯಕ ನಿರ್ದೇಶಕರು (ಪ.ರಾ) ಗಣೇಶ ಕೆ.ಎಸ್., ವ್ಯವಸ್ಥಾಪಕ ರಾಜೇಂದ್ರ ಮೊರಬದ, ತಾಲ್ಲೂಕ ಸಿಬ್ಬಂದಿಗಳಾದ ಶ್ರೀಧರ ಸರದಾರ, ರಮೇಶ ಮಾದರ ಸೇರಿದಂತೆ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಇದ್ದರು.

## ಸರ್ವತೋಮುಖ ಬೆಳವಣಿಗೆಗೆ ಶಿಬಿರ ಸಹಕಾರಿ

ಕೆಂಭಾವಿ: ವಿದ್ಯಾರ್ಥಿಗಳು ಕಲಿಕೆಯ ಜೊತೆಗೆ ಸೇವಾ ಮನೋಭಾವ ಮೈಗೂಡಿಸಿಕೊಂಡು ರಾಷ್ಟ್ರದ ಏಳಿಗೆಗೆ ಶ್ರಮಿಸಬೇಕು ಎಂದು ಯುವ ಮುಖಂಡ ಆದಿತ್ಯ. ಎಸ್. ಪೋಲೀಸ್ ಪಾಟೀಲ್ ಹೇಳಿದರು.

ಪಟ್ಟಣದ ಶ್ರೀಮತಿ ಗಂಗೂಬಾಯಿ ಶಾಂತಗೌಡ ಪೋಲೀಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು ಶಿಬಿರಾರ್ಥಿಗಳು ಏಳು ದಿನಗಳ ಕಾಲ ನಡೆಯುವ ವಿಶೇಷ ಶಿಬಿರದ ಸದುಪಯೋಗ ಪಡಿಸಿಕೊಂಡು ಉತ್ತಮ ವಿದ್ಯಾರ್ಥಿಗಳಾಗಿ, ಉತ್ತಮ ಪ್ರಜೆಗಳಾಗಿ, ಉತ್ತಮ ನಾಯಕರಾಗಿ ಎಂದ ಅವರು, ಸಮಾಜದ ಸರ್ವತೋಮುಖ ಬೆಳವಣಿಗೆಗೆ



ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರ ಸಹಕಾರಿಯಾಗುತ್ತದೆ. ವಿದ್ಯಾರ್ಥಿಗಳು ಶ್ರಮವೇ ಜಯತೇ ಎಂಬು ಧ್ಯೇಯ ವಾಕ್ಯ ಪರಿಪಾಲನೆ ಮಾಡಿದರೆ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ, ರಾಜಕೀಯ, ಧಾರ್ಮಿಕ, ಕ್ಷೇತ್ರದಲ್ಲಿ ಸಾಧನೆಗೈದು ತಮ್ಮದೇಯಾದ ಛಾಪು ಮೂಡಿಸಲು ಸಾಧ್ಯವಾಗುತ್ತದೆ ಎಂದರು.

ವಾಣಿಜ್ಯ ವಿಭಾಗದ ಮುಖ್ಯಸ್ಥರು ಹಾಗೂ ಎನ್ ಎಸ್ ಎಸ್ ಅಧಿಕಾರಿ ಡಾ. ಸಿದ್ದಲಿಂಗ ರಾಠೋಡ್ ಪ್ರಾಸ್ತಾವಿಕ ಮಾತನಾಡಿ ಶಿಬಿರದ ಧ್ಯೇಯೋದ್ದೇಶಗಳನ್ನು ತಿಳಿಸಿದರು.

ಪ್ರಾಂಶುಪಾಲ ಡಾ ನಾಗಪ್ಪ ಚವಲ್ಕರ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಡಾ ನಂದಾ ವಾರದ, ನಸ್ರೀನ್ ತಾಜಾ, ಗುಲಾಂ ಮಹಿಬೂಬಸಾಬ್, ಮಲ್ಲಣ್ಣ ಬಿಳೇಬಾವಿ, ಡಾ ಯಂಕನಗೌಡ ಪಾಟೀಲ್, ಮಾಸುಮ ಅಲಿ ನಾಶಿ, ಸೇರಿದಂತೆ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿ ಮತ್ತು ಶಿಬಿರಾರ್ಥಿಗಳು ಭಾಗವಹಿಸಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089